ವಿಜಯಪುರ | ಸಂಪುಟ 02 | ಸಂಚಿಕೆ 150 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily


ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಆಗಸ್ಟ್ 07, 2024



“ಮುಡಾ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ಆರೋಪಿಗಳನ್ನು ನೋಡಿದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ 01 ಆರೋಪಿಯಾಗಿದ್ದಾರೆ. ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವವರೆಗೂ ನಮ್ಮ ಹೋರಾಟ ಮುಂದುವರಿಯಲಿದೆ.”

– ಬಿ.ವೈ.ವಿಜಯೇಂದ್ರ

ಬಿಜೆಪಿ ರಾಜ್ಯಾಧ್ಯಕ್ಷರು

**ಬಿಜೆಪಿ & ಜೆಡಿಎಸ್ ನಾಯಕರು ಪರಸ್ಪರ ದೂಷಿಸುವ ಹಳೆಯ ವಿಡಿಯೋಗಳನ್ನು ಪ್ರದರ್ಶಿಸಿದ ಡಿಸಿಎಂ ಡಿ.ಕೆ.ಶಿವಕುಮಾರ್**

# ಬಿಜೆಪಿ ಮತ್ತು ಜೆಡಿಎಸ್ ಅವಕಾಶವಾದಿಗಳ ಗುಂಪು :ಡಿಸಿಎಂ

ಮಂಡ್ಯ: ಬಿಜೆಪಿ ಮತ್ತು ಜೆಡಿಎಸ್ ನಾಯಕರು ವಿವಿಧ ಸಂದರ್ಭಗಳಲ್ಲಿ ಒಬ್ಬರನ್ನೊಬ್ಬರು ದೂಷಿಸುವ ಹಳೆಯ ವಿಡಿಯೋಗಳನ್ನು ವೇದಿಕೆ ಮೇಲೆಯೇ ತೋರಿಸಿದ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ , ರಾಜ್ಯದ ಪ್ರತಿಪಕ್ಷಗಳನ್ನು “ಅವಕಾಶವಾದಿಗಳ ಗುಂಪು” ಎಂದು ಬಣ್ಣಿಸಿದ್ದಾರೆ.

ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಶಿವಕುಮಾರ್, ಸರ್ಕಾರವನ್ನು ಗುರಿಯಾಗಿಸುವ ಪ್ರತಿಪಕ್ಷಗಳ ತಂತ್ರವು ಕೆಲಸ ಮಾಡುವುದಿಲ್ಲ ಮತ್ತು ಮುಂದಿನ ಹತ್ತು ವರ್ಷಗಳ ಕಾಲ ತಮ್ಮ ಪಕ್ಷ ರಾಜ್ಯದಲ್ಲಿ ಅಧಿಕಾರದಲ್ಲಿರುತ್ತದೆ ಎಂದು ಹೇಳಿದರು.

ವೇದಿಕೆಯ ಮೇಲಿದ್ದ ದೊಡ್ಡ ಪರದೆಯ ಮೇಲೆ ಬಿಜೆಪಿ ಮತ್ತು ಜೆಡಿ-ಎಸ್ ನಾಯಕರು ವಿವಿಧ ವಿಷಯಗಳ ಕುರಿತು ಪರಸ್ಪರ ವಾಗ್ದಾಳಿ ನಡೆಸುತ್ತಿರುವ ಹಳೆಯ ದೃಶ್ಯಾವಳಿಗಳನ್ನು ತೋರಿಸಿದರು.

ಪ್ರತಿಪಕ್ಷಗಳನ್ನು ಅವಕಾಶವಾದಿಗಳ ಗುಂಪು ಎಂದು ಕರೆದ ಶಿವಕುಮಾರ್, ಹಿಂದುಳಿದ ಸಮುದಾಯದ ವ್ಯಕ್ತಿಯೊಬ್ಬರು ಪ್ರತಿಷ್ಠಿತ ಹುದ್ದೆಯನ್ನು ಅಲಂಕರಿಸುವುದನ್ನು ಸಹಿಸಲಾಗದ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸುವ ಉದ್ದೇಶದಿಂದ ಹಳೆಯ ವೈರಿಗಳು ಈಗ ಮಿತ್ರರಾಗಿದ್ದಾರೆ. ಈ ದೃಶ್ಯಾವಳಿಗೆ ಉತ್ತರ ನೀಡುವಂತೆ ಜನರನ್ನು ಕೇಳಿದರು.



ಕಾಂಗ್ರೆಸ್ ಪ್ರತಿಪಕ್ಷದಲಿದ್ದಾಗ ಕಾವೇರಿ ನದಿ ನೀರು ಹಂಚಿಕೆ ವಿಷಯ ಮತ್ತು ಕನಕಪುರದಲ್ಲಿ ಕಾವೇರಿ ನದಿಗೆ ಮೇಕೆದಾಟು ಜಲಾಶಯಕ್ಕಾಗಿ ಪಾದಯಾತ್ರೆ ನಡೆಸಿದ್ದೇವೆ. ‘ಭಾರತ್ ಜೋಡೋ ಯಾತ್ರೆ’ ಕೂಡ ಮಾಡಿದೆವು. ಬಿಜೆಪಿಯವರು ನಮ್ಮನ್ನು ನಕಲು ಮಾಡುತ್ತಿದ್ದಾರೆ. ವಿಪಕ್ಷಗಳ ಪಾದಯಾತ್ರೆ ತಮ್ಮ ಪಾಪ ಮತ್ತು ಮಹಾ ಭ್ರಷ್ಟಾಚಾರವನ್ನು ತೊಳೆಯುವ ಪಶ್ಚಾತ್ತಾಪ ಯಾತ್ರೆಯಾಗಿದೆ ಎಂದು ಅವರು ವ್ಯಂಗ್ಯವಾಡಿದರು.

ಮೇಕೆದಾಟು ಯೋಜನೆ ಜಾರಿಯಾಗಿದ್ದರೆ ರೈತರಿಗೆ ಅನುಕೂಲವಾಗುತ್ತಿತ್ತು. ಆದರೆ ಬಿಜೆಪಿ ಮತ್ತು ಜೆಡಿಎಸ್ ಇದಕ್ಕೆ ಅವಕಾಶ ನೀಡುತ್ತಿಲ್ಲ. ಬದಲಾಗಿ ಜನರ ಗಮನವನ್ನು ಬೇರೆಡೆ ಸೆಳೆಯುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

## ಶಾಲಾ ಬಸ್ ಡಿಕ್ಕಿ: 5 ವರ್ಷದ ಬಾಲಕ ಸಾವು

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಖಾಸಗಿ ಶಾಲಾ ಬಸ್, ಸರ್ಕಾರಿ ಅಂಗನವಾಡಿಗೆ ಹೊರಟಿದ್ದ ಮಗುವಿಗೆ ಡಿಕ್ಕಿ ಹೊಡೆದು ಐದು ವರ್ಷದ ಮಗು ಸಾವನ್ನಪ್ಪಿದ ಘಟನೆ ಮಂಗಳವಾರ ಅರಳದಿನ್ನಿ ಗ್ರಾಮದಲ್ಲಿ ಜರುಗಿದೆ.

ಮೃತ ಮಗು ಅರಳದಿನ್ನಿ ಗ್ರಾಮದ ಬಸವರಾಜ ಮಂಜುನಾಥ ಚೋಪಡೆ. (5). ಬಾಲಕ ಬಸವರಾಜ ಅದೇ ಗ್ರಾಮದ ಅಂಗನವಾಡಿಯಲ್ಲಿ ಕಲಿಯುತ್ತಿದ್ದ. ಎಂದಿನಂತೆ ಶಾಲೆಗೆ ಮಂಗಳವಾರ ಬೆಳಿಗ್ಗೆ ಹೊರಟಿದ್ದ. ಆದರೆ ಅದೇ ಸಮಯಕ್ಕೆ ಗ್ರಾಮಕ್ಕೆ ಬಂದ ನಿಡಗುಂದಿ ಪಟ್ಟಣದ ಬಿ.ಎಂ.ಎಸ್. ಶಿಕ್ಷಣ ಸಂಸ್ಥೆಯ ಶಾಲಾ ಬಸ್ ಆ ಮಗುವಿಗೆ ಡಿಕ್ಕಿ ಹೊಡೆದಿದೆ. ನೆಲಕ್ಕುರುಳಿದ ಬಾಲಕನ ತಲೆ ಮೇಲೆ ಗಾಲಿ ಹಾಯ್ದು ಸ್ಥಳದಲ್ಲಿಯೇ ಮಗು ಮೃತಪಟ್ಟಿದೆ. ಚಾಲಕನ ನಿರ್ಲಕ್ಷ್ವವೇ ಘಟನೆಗೆ ಕಾರಣ ಎಂದು ನಿಡಗುಂದಿ ಪೊಲೀಸರು ತಿಳಿಸಿದ್ದಾರೆ.



ಮಗು ಸಾವಿನಿಂದ ನೊಂದು, ಆಕ್ರೋಶಗೊಂಡ ಗ್ರಾಮಸ್ಥರು ಬಸ್ ಎದುರು ಮಗುವಿನ ಶವ ಇಟ್ಟು ಪ್ರತಿಭಟಿಸಿದರು. ನಿಡಗುಂದಿ ಪೊಲೀಸರು ಸ್ಥಳಕ್ಕೆ ಬಂದು ಪ್ರತಿಭಟನಾಕಾರರನ್ನು ಸಮಾಧಾನಪಡಿಸಿದರು. ಸಂಬಂಧಿಗಳ ಆಕ್ರಂದನ ಮುಗಿಲುಮುಟ್ಟಿತ್ತು. ತಾಯಿಯ ರೋಧನ ಹೇಳತೀರದಾಗಿತ್ತು.

ಪೊಲೀಸರ ನಿರ್ಲಕ್ಷ್ಯ ಆರೋಪ:

ನಿಡಗುಂದಿ ಭಾಗದಲ್ಲಿ 50 ಕ್ಕೂ ಹೆಚ್ಚು ಖಾಸಗಿ ಶಾಲೆಗಳಿದ್ದು ಹಲವಾರು ಶಾಲಾ ಬಸ್ ಗಳಿವೆ. ಆಯಾ ಶಾಲಾ ವಾಹನಗಳ ಚಾಲಕರ ಪೊಲೀಸ್ ತಪಾಸಣೆ, ವಾಹನ ಚಾಲನಾ ಲೈಸನ್ಸ್ ನಿಡಗುಂದಿ ಪೊಲೀಸರು ಕಾಲ ಕಾಲಕ್ಕೆ ತಪಾಸಣೆ ನಡೆಸುತ್ತಿಲ್ಲ. ಚಾಲಕರಿಗೆ, ಶಾಲಾ ಮುಖ್ಯಸ್ಥರ ಸಭೆ ನಡೆಸಿ ಅವರಿಗೆ ಸುರಕ್ಷತೆ, ಮಕ್ಕಳ ಹಕ್ಕುಗಳ ಬಗ್ಗೆ ಯಾವುದೇ ತಿಳುವಳಿಕೆ ಸಭೆ ನಡೆಸುವುದಿಲ್ಲ. ಪ್ರತಿ ಶಾಲಾ ವಾಹನ ಯಾವಾಗಲಾದರೊಮ್ಮೆ ನಿಲ್ಲಿಸಿ ತಪಾಸಣೆ ನಡೆಸಿ ಮಕ್ಕಳ ಸುರಕ್ಷತೆಯ ಬಗ್ಗೆ ಪರಿಶೀಲನೆಯನ್ನು ನಡೆಸುವುದಿಲ್ಲ, ಶಾಲಾ ಸುರಕ್ಷತೆ ಪಾಲಿಸದ ಶಾಲಾ ವಾಹನಗಳನ್ನು ಜಪ್ತಿ ಮಾಡಬೇಕು ಎಂದು ಅರಳದಿನ್ನಿ ಶಾಲೆಯ ಎಸ್ಡಿ-ಎಂಸಿ ಅಧ್ಯಕ್ಷ ಬಸವರಾಜ ಹೆರಕಲ್ ಆಗ್ರಹಿಸಿದ್ದಾರೆ.

## ಭೀಮಸಿ ಕಲಾದಗಿ ನಿಧನಕ್ಕೆ ಸಚಿವ ಎಂ. ಬಿ. ಪಾಟೀಲ ಸಂತಾಪ

ಉದಯರಶ್ಮಿ ನ್ಯೂಸ್

ವಿಜಯಪುರ: ಜನಪರ ನಾಯಕ ಭೀಮಸಿ ಕಲಾದಗಿ ಅವರ ನಿಧನಕ್ಕೆ ಬೃಹತ್ ಮತ್ತು ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಲ್ಲದೇ, ಸಕಲ ಸರಕಾರಿ ಗೌರವಗಳೊಂದಿಗೆ ಮೃತರ ಅಂತ್ಯಕ್ರಿಯೆ ಕೈಗೊಳ್ಳಲು ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ಕ್ರಮ ಕೈಗೊಂಡಿದ್ದಾರೆ.

ಭೀಮಸಿ ಕಲಾದಗಿ ಅವರು ವಯೋಸಹಜ ಕಾರಣಗಳಿಂದ ನಿಧನರಾಗಿದ್ದರು. ಈ ವಿಷಯ ತಿಳಿದ ತಕ್ಷಣ ಸಚಿವರು ಸಿಎಂ ಎಸ್. ಸಿದ್ಧರಾಮಯ್ಯ ಅವರೊಂದಿಗೆ ಮಾತನಾಡಿ, ಭೀಮಸಿ ಕಲಾದಗಿ ಅವರು ಕಳೆದ 50 ವರ್ಷಗಳಿಂದ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡು ರೈತರು, ಕಾರ್ಮಿಕರು ಮತ್ತು ಮಹಿಳೆಯರ ಹಕ್ಕುಗಳಿಗಾಗಿ ಕ್ರಿಯಾಶೀಲರಾಗಿ ನಡೆಸಿದ ಹೋರಾಟದ ಕುರಿತು ಮಾಹಿತಿ ನೀಡಿದರು. ಅಲ್ಲದೇ, ಸಕಲ ಸರಕಾರಿ ಗೌರವಗಳೊಂದಿಗೆ ಅವರ ಅಂತ್ಯಕ್ರಿಯೆ ನೆರವೇರಿಸಿ ಅವರಿಗೆ ನಿಜವಾದ ಶೋಕಗೌರವ ನೀಡದಂತಾಗುತ್ತದೆ ಎಂದು ಮನವರಿಕೆ ಮಾಡಿಕೊಟ್ಟರು. ಈ ಹಿನ್ನೆಲೆಯಲ್ಲಿ ಸರಕಾರ ಸಕಲ ಸರಕಾರಿ ಗೌರವಗಳೊಂದಿಗೆ ಮೃತರ ಅಂತ್ಯಕ್ರಿಯೆ ನೆರವೇರಿಸಲು ಆದೇಶ ಹೊರಡಿಸಿದೆ.

ಈ ಮಧ್ಯೆ, ಭೀಮಸಿ ಕಲಾದಗಿ ವಯೋಸಹಜ ಕಾರಣಗಳಿಂದ ಭೀಮಸಿ ಕಲಾದಗಿ ನಿಧನರಾಗಿದ್ದು, ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತೇನೆ. ವಿಜಯಪುರ ಜಿಲ್ಲೆಯ ಮುಳವಾಡ ಏತ ನೀರಾವರಿ ಸೇರಿದಂತೆ ವಿವಿಧ ನೀರಾವರಿ ಯೋಜನೆಗಳ ಅನುಷ್ಠಾನ ಕುರಿತು ರೈತರ ಜಾಗೃತಿ ಹೋರಾಟಗಳನ್ನು ಸಂಘಟನೆಗಳನ್ನು ನಡೆಸುತ್ತಾ ಜಿಲ್ಲೆಯಲ್ಲಿ ಸದಾ ಕ್ರಿಯಾಶೀಲರಾಗಿದ್ದರು. ನೀರಾವರಿ ಯೋಜನೆಗಳ ಅನುಷ್ಠಾನಗೊಳ್ಳುವವರೆಗೆ ಚಪ್ಪಲಿ ಧರಿಸದೆ ಬರಿಗಾಲಲ್ಲಿ ತಿರುಗಾಡುತ್ತೇನೆ ಎಂದು ಶಪಥ ಮಾಡಿ ಬರಿಗಾಲ ಭೀಮಶಿ ಎಂದೇ ಹೆಸರಾಗಿದ್ದ ಇವರು ಇತ್ತೀಚೆಗೆ ನೀರಾವರಿ ಯೋಜನೆಗಳ ಅನುಷ್ಠಾನದ ಕುರಿತು ಹೆಮ್ಮೆ ಮತ್ತು ಅಭಿಮಾನ ವ್ಯಕ್ತಪಡಿಸಿದ್ದು ಮರೆಯಲಾಗದು ಎಂದು ಅವರು ಶೋಕ ಸಂದೇಶದಲ್ಲಿ ನುಡಿನಮನ ಸಲ್ಲಿಸಿದ್ದಾರೆ.



### ರಾಜ ನುಡಿ

ನಾವು ಇನ್ನೊಬ್ಬರಿಗಾಗಿ ಪ್ರಾರ್ಥಿಸಿದಾಗ ದೇವರೊಂದಿಗೆ ಮಾತನಾಡುತ್ತೇವೆ. ಇನ್ನೊಬ್ಬರನ್ನು ಪ್ರೀತಿಸಿದಾಗ ದೇವರಿಗೆ ಸಮೀಪ ನಿಲ್ಲುತ್ತೇವೆ. ಇನ್ನೊಬ್ಬರ ಕಣ್ಣೀರೊರೆಸಿದಾಗ ದೇವರನ್ನು ಸ್ಪರ್ಶಿಸುತ್ತೇವೆ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ

*ಉದಕವೊಂದರಲ್ಲಿ ತಂದು,*
*ವರ್ಣ ಭೇದಕ್ಕೆ ಹಲವಾದ ತೆರನಂತೆ,*
*ಆತ್ಮ ನಾನೆಂಬುದ ಮರೆದು,*
*ಸರ್ವರಲ್ಲಿ ಬೆರಸುವ ಚಿತ್ತ ಒಂದೋ, ಎರಡೋ ?*
*ನೆಲಜಲ ಒಂದಾದಡೆ, ಬೆಳೆವ ವೃಕ್ಷ*
*ಹಲವಾದ ತೆರದಂತೆ,*
*ಅರಿವು ಮರವೆಗೊಳಗಾದ ಆತ್ಮನ*
*ತಿಳಿದಲ್ಲಿ,ಬೇರೊಂದೆಡೆಗೆ ತೆರಪಿಲ್ಲ,*
*ಮನಸಂದಿತ್ತು ಮಾರೇಶ್ವರಾ.*

ಈ ಜಗತ್ತಿನಲ್ಲಿರುವ ದುಃಖ ದುಮ್ಮಾನಗಳಿಗೆ ಮೂಲಕಾರಣವನ್ನು ಮನಸಂದ ಮಾರಿತಂದೆಯವರು ಈ ವಚನದಲ್ಲಿ ಕಂಡುಕೊಂಡಿದ್ದಾರೆ. ಆತ್ಮ ಮತ್ತು ಪರಮಾತ್ಮಗಳು ಬೇರೆ ಎಂಬ ಭಾವನೆಯಿಂದ ನೋಡುವವ ರಿಗೆ ಪ್ರತಿ ಜೀವಿ/ವ್ಯಕ್ತಿಯೂ ಬೇರೆಯಾಗಿ ಕಾಣುತ್ತವೆ. ಪರಿಣಾಮವಾಗಿ ಹೋಲಿಕೆ ಪ್ರಾರಂಭವಾಗುತ್ತದೆ. ಹೋಲಿಕೆಯು ವ್ಯಕ್ತಿಯಲ್ಲಿ ಖಿನ್ನತೆ ಅಥ ವಾ ಅಹಂಕಾರವನ್ನು ತುಂಬುತ್ತದೆ. ಇದು ದುಃಖಕ್ಕೆ ದಾರಿಯಾಗುತ್ತದೆ. ಆತ್ಮ ಮತ್ತು ಪರಮಾತ್ಮ ಒಂದೇ ಎಂದು ಅರಿತಾಗ ತಾನು ಇತರರಿಗಿಂತ ಭಿನ್ನ ಎನ್ನುವ ಭಾವನೆ ಕಡಿಮೆಯಾಗುತ್ತದೆ. ಇತರರ ನೋವು ನಲಿವುಗಳು ತನ್ನ ನೋವು ನಲಿವು ಎಂಬ ಭಾವನೆ ಉಂಟಾಗುತ್ತದೆ ಇವರಿಗೆ ಸರ್ವವು ಸುಂದರವಾಗಿರುತ್ತದೆ. ಇಲ್ಲಿ ಆತ್ಮ (ಲಿಂಗ) ಮತ್ತು ಪರಮಾತ್ಮ (ಮಹಾ ಲಿಂಗ)ಗಳು ಒಂದೇ, ಆದ-ರೆ ತೋರಿಕೆಯಲ್ಲಿ ಭಿನ್ನವಾಗಿರುತ್ತವೆ ಎನ್ನುವು ದಕ್ಕೆ ಉತ್ತಮವಾದಂತಹ ಹೋಲಿಕೆಯನ್ನು ನೀಡಿದ್ದಾರೆ. ಒಬ್ಬ ಚಿತ್ರಕಾರ ನು ತನ್ನ ಚಿತ್ರರಚನೆಗೆ ವಿವಿಧ ಬಣ್ಣಗಳನ್ನು ಬಳಸುತ್ತಾನೆ. ಎಲ್ಲ ಬಣ್ಣಗಳ ತಯಾರಿಕೆಗೆ ಬಳಕೆಯಾಗುವ ಬಣ್ಣರಹಿತ ನೀರು ಒಂದೇ ಆದ-ರೂ ವಿವಿಧ ಬಣ್ಣಗಳನ್ನು ತನ್ನೊಳಗೆ ಅಡಗಿಸಿಕೊಂಡು ವಿಭಿನ್ನ ರೂಪದಲ್ಲಿ ಗೋಚರಿಸು ವಂತೆ. ಮಹಾಲಿಂಗವು ವಿವಿಧ ಜೀವಿಗಳಲ್ಲಿ ಪ್ರಾಣಲಿಂಗವಾಗಿ ಚೈತನ್ಯ ಸ್ವ ರೂಪದಲ್ಲಿದೆ.ನೆಲಜಲ ಒಂದಾದಾಗ ವಿವಿಧರೀತಿಯ ಸಸ್ಯಗಳು ಉಗಮ ವಾದರೂ ಅವುಗಳಿಗೆಲ್ಲ ಮೂಲವಾದ ಚೈತನ್ಯವು ಒಂದೇ ಎಂಬ ಅರಿ ವು ಆತ್ಮ ಜ್ಞಾನವನ್ನು ನೀಡುತ್ತದೆ. ಆತ್ಮನ ತಿಳಿದಲ್ಲಿ,ಬೇರೊಂದೆಡೆಗೆ ತೆರಪಿಲ್ಲೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ರೈತ ಹೋರಾಟಗಾರಗೆ ಸರ್ಕಾರಿ ಗೌರವದೊಂದಿಗೆ ಅಂತಿಮ ವಿದಾಯ

ಉದಯರಶ್ಮಿ ನ್ಯೂಸ್

ಇಂಡಿ: ಈ ಜನ್ಮವೇ ರೈತರಿಗಾಗಿ, ಕಾರ್ಮಿಕರಗಾಗಿ ಎಂದು ಅವಿರತವಾಗಿ ಹೋರಾಡಿದ ಭೀಮಶಿ ಕಲಾದಗಿ ಇಹಲೋಕ ತ್ಯಜಿಸಿದ್ದು ಮಂಗಳವಾರ ಸ್ವಗ್ರಾಮದಲ್ಲಿ ಕಂದಾಯ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ಹಾಗೂ ಸಿಪಿಐ ಎಮ್ ಎಮ್ ಡಪ್ಪಿನ ಅವರ ನೇತೃತ್ವದಲ್ಲಿ ಸರ್ಕಾರಿ ಗೌರವಗಳೊಂದಿಗೆ ಅಂತಿಮ ಸಂಸ್ಕಾರ ನಡೆಯಿತು.

ನಿರಂತರವಾಗಿ 50 ವರ್ಷಗಳ ಕಾಲ ಹೋರಾಟವೆ ಬದುಕು ಎಂದು, ಬದುಕಿದ ಕಲಾದಗಿ ಮುತ್ಯಾ ಬರಿಗಾಲ ಭೀಮಶಿ ಎಂದು ಪ್ರಸಿದ್ಧಿ ಹೊಂದಿದ್ದ ಜಿಲ್ಲೆಯ ದಿಮಂತ ಹೋರಾಟಗಾರ ಎಂದು ಜನರಾಡುವ ಮಾತು. ತಾಲ್ಲೂಕಿನ ಹಂಜಗಿ ಗ್ರಾಮದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಸಂಸ್ಕಾರ ನಡೆಯಿತು.



ಅವರ ಸಾವಿಗೆ ಅಪಾರ ಬಂಧು ಬಳಗ, ರಾಜಕೀಯ ಮುಖಂಡರು, ಗಣ್ಯರು, ಅವರು ಪ್ರೀತಿಸುವ ಕಾರ್ಮಿಕ ಬಳಗ ಕಂಬನಿ ಮಿಡಿದಿದ್ದಾರೆ.

ಈ ಸಂದರ್ಭದಲ್ಲಿ ಸಚಿವ ಶಿವಾನಂದ ಪಾಟೀಲ, ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕ ದೇವಾನಂದ ಚೌವ್ಹಾಣ್, ಅಪ್ಪು ಪಟ್ಟಣಶೆಟ್ಟಿ, ಮಲ್ಲಿಕಾರ್ಜುನ ಮಂಡಿಗೇರಿ, ಕಂ.ಕೆ.ನೀಲಾ, ಅಣ್ಣಾರಾಯ ಏಳಗೇರಿ, ಬಿ ಡಿ ಪಾಟೀಲ, ರೀಯಾಜ ಪಾರೋಕಿ, ಸಿದ್ದು ಡಂಗಾ, ರಮೇಶ ರಾಠೋಡ, ಶಿವಾನಂದ ಅಂಗಡಿ ಹಾಗೂ ಅಪಾರ ಪ್ರಮಾಣದ ಅಂಗನವಾಡಿ ಕಾರ್ಯಕರ್ತೆಯರು ಅಂತಿಮ ದರ್ಶನ ಪಡೆದರು.

## ಚುನಾಯಿತ ಮಹಿಳೆಯರ ಕುಟುಂಬ ಸದಸ್ಯರ ಮದ್ಯಸ್ಥಿಕೆಗೆ ಕಡಿವಾಣಕ್ಕೆ ಕೆಆರೆಸ್ ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಚುನಾಯಿತ ಮಹಿಳೆಯರ ಸದಸ್ಯರ ಕುಟುಂಬ ವರ್ಗದಿಂದ ಮದ್ಯಸ್ಥಿಕೆಗೆ ಕಡಿವಾಣ ಹಾಕುವಂತೆ ಆಗ್ರಹಿಸಿ ಕರ್ನಾಟಕ ರಾಷ್ಟ್ರಸಮಿತಿ ಪಕ್ಷದ ವತಿಯಿಂದ ರಾಜ್ಯದ ಮುಖ್ಯಮಂತ್ರಿಗಳಿಗೆ ವಿಜಯಪುರ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ವಿಜಯಪುರ ಇವರ ಮುಖಾಂತರ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಪಕ್ಷದ ನಗರ ಅಧ್ಯಕ್ಷರಾದ ಅಬ್ದುಲ ಹಮೀದ ಎಸ್. ಇನಾಮದಾರ ಮಾತನಾಡಿ, ವಿಜಯಪುರ ಜಿಲ್ಲೆಯ, ಮಹಾನಗರ ಪಾಲಿಕೆ, ಪುರಸಭೆ, ಹಾಗೂ ಪಂಚಾಯತ್ ರಾಜ್ ಚುನಾಯಿತ ಮಹಿಳೆಯರ ಗಂಡ ಹಾಗೂ ಮಕ್ಕಳು ಮಧ್ಯಸ್ಥಿಕೆಯು ದಿನನಿತ್ಯ ಹೆಚ್ಚಾಗುತ್ತಿದೆ. ಚುನಾಯಿತ ಮಹಿಳೆಯರ ಗಂಡ ಮಕ್ಕಳು ಹಾಗೂ ಇವರ ಕುಟುಂಬದ ಸದಸ್ಯರಿಂದ ಮಹಾನಗರ ಪಾಲಿಕೆ ಕಾರ್ಮಿಕರ ಜೊತೆ ಅವಾಚ್ಯ ಶಬ್ದಗಳು ಹಾಗೂ ಮಹಾನಗರ ಪಾಲಿಕೆ ಹಾಗೂ ಪಂಚಾಯತಿಯ ಸಭೆಗಳಲ್ಲಿ ಇವರ ಭಾಗಿಯಾಗಿ ಕಚೇರಿಗಳಲ್ಲಿ ಚುನಾಯಿತ ಮಹಿಳೆಯರ ಸ್ಥಾನಕ್ಕೆ ಇವರು ಬಳಸುವುದು ಮತ್ತು ಸಭೆ ಹಾಗೂ ಸಮಾರಂಭಗಳಲ್ಲಿ ಮಹಿಳೆಯರೇ ಬದಲಾಗಿ ಮಕ್ಕಳು ಹಾಗೂ ಅವರ ಮನೆಯವರು ಶಾಮೀಲಾಗುವುದು ಹಾಗೂ ಮಾಧ್ಯಮಯದಿಂದ ಸಂದರ್ಶನಗಳು ಮೌಖಿಕ ಮಾಹಿತಿಯ ಪ್ರಕಾರ ಕೆಲವೊಂದು ಸಮಯದಲ್ಲಿ ಪತ್ರಗಳಿಗೆ ಸಹಿ ಮಾಡಿದ್ದಾರೆ ಎಂದು ಮಾಹಿತಿ ಬಂದಿದೆ. ಹಾಗೂ ಚುನಾಯಿತ ಮಹಿಳೆಯರ ಸ್ಥಾನದ ದುರುಪಯೋಗ ಪಡೆದುಕೊಂಡು ತಮ್ಮ ದರ್ಪವನ್ನು ಪಾಲಿಕೆ ಸಿಬ್ಬಂದಿ ಹಾಗೂ ಸಾರ್ವಜನಿಕರ ಮೇಲೆ ಮಾಡುತ್ತಿರುವ ದೌರ್ಜನ್ಯಕ್ಕೆ ಕಡಿವಾಣ ಹಾಕಬೇಕು. ಈ ಕುರಿತು ಸರಕಾರವು ಸುತ್ತೋಲೆಯ ಮೂಲಕ ಸುತ್ತೋಲೆ ಹೊರಡಿಸಿ ನಿರ್ಣಯವನ್ನು ಕೈಗೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಪ್ರಕಾಪ ಎಸ್.ಕೆ., ಕಾಂತುಗೌಡ ಬೆಂಡವಾಡ, ದುರ್ಗಪ್ಪ ಬೂದಿಹಾಳ, ವಿಕ್ರಮ ವಾಗಮೋರೆ ಇನ್ನಿತರರು ಉಪಸ್ಥಿತರಿದ್ದರು.

**ಮುನ್ನೆಚ್ಚರಿಕೆಯಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ**

## ಸೊನ್ನ ಬ್ಯಾರೇಜ್‌ಗೆ ಡಿಸಿ ಟಿ.ಭೂಬಾಲನ್ ಭೇಟಿ-ಪರಿಶೀಲನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮಂಗಳವಾರ ಭೀಮಾನದಿಗೆ ನಿರ್ಮಿಸಲಾಗಿರುವ ಸೊನ್ನ ಬ್ಯಾರೇಜ್‌ಗೆ ಕಲ್ಬುರ್ಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ ಅವರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಹಾರಾಷ್ಟ್ರದ ಉಜನಿ ಹಾಗೂ ವೀರ ಜಲಾಶಯದಿಂದ ನೀರು ಹರಿಬಿಟ್ಟಿರುವ ಹಿನ್ನಲೆಯಲ್ಲಿ ಭೀಮಾ ನದಿ ಪಾತ್ರದ ಪ್ರವಾಹ ಪರಿಸ್ಥಿತಿ ಬಗ್ಗೆ ಮುನ್ನೆಚ್ಚ-ರಿಕೆ ಕ್ರಮ ಕೈಗೊಳ್ಳಲು ಭೇಟಿ ನೀಡಿದ ಅವರು, ಈಗಾಗಲೇ ಮಹಾರಾಷ್ಟ್ರದಲ್ಲಿ ಅಲ್ಪ ಪ್ರಮಾಣದಲ್ಲಿ ಮಳೆ ನಿಂತಿದ್ದು ಉಜನಿ ಹಾಗೂ ವೀರ ಜಲಾಶಯದಿಂದ ನೀರು ಹರಿಸಲಾಗುತ್ತಿರುವುದರಿಂದ ಭೀಮಾ ನದಿ ಪಾತ್ರದ ಜನರು ಮುನ್ನೆಚ್ಚರಿಕೆ ವಹಿಸಬೇಕು ಮತ್ತು ಸಂಬಂಧಿಸಿದ ಅಧಿಕಾರಿಗಳು ನೀಡುವ ಮುನ್ನೆಚ್ಚ-ರಿಕೆ, ಸೂಚನೆಗಳನ್ನು ಪಾಲಿಸಬೇಕು ಎಂದು ತಿಳಿಸಿದ ಅವರು, ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು. ನದಿ ಪಾತ್ರಕ್ಕೆ ಬಟ್ಟೆ ತೊಳೆಯಲು, ದನ, ಕರುಗಳಿಗೆ ನದಿ ಹತ್ತಿರಕ್ಕೆ ಹೋಗದಂತೆ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.



ಈ ಸಂದರ್ಭದಲ್ಲಿ ಬ್ಯಾರೇಜನ ಎಲ್ಲ ಕ್ರಸ್ಟ್ ಗೇಟ್ ಗಳನ್ನು ಪರಿಶೀಲನೆ ನಡೆಸಿದ ಅವರು, ಭೀಮಾ ನದಿ ತೀರದಲ್ಲಿ ಪ್ರವಾಹಕ್ಕೊಳಗಾಗುವ ಗ್ರಾಮುಗಳ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದು ಅಗತ್ಯ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ ಸಿಇಓ ಬನ್ವರ್ ಸಿಂಗ್ ಮೀನಾ, ಆಲಮೇಲ ತಹಸೀಲ್ದಾರ ಸುರೇಶ್ ಚಾವಲರ, ಅಫಜಲಪುರ ತಹಶೀಲ್ದಾರ ಸಂಜೀವಕುಮಾರ ದಾಸರ,ಸಂತೋಷ ಸಜ್ಜನ, ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಆರೋಗ್ಯ, ಶಿಕ್ಷಣ, ವಿಕಲಚೇತನರ ಸೌಲಭ್ಯಕ್ಕೆ ರೂ.60 ಲಕ್ಷ ಮಂಜೂರು

ಉದಯರಶ್ಮಿ ನ್ಯೂಸ್



ವಿಜಯಪುರ: 2024-25ನೇ ಸಾಲಿಗೆ ನಗರ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿ ಆರೋಗ್ಯ, ಶಿಕ್ಷಣ ಹಾಗೂ ವಿಕಲಚೇತನರಿಗೆ ಸೌಲಭ್ಯ ಕಲ್ಪಿಸಲು ರೂ.60 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ತಿಳಿಸಿದ್ದಾರೆ.

ನಗರ ಮತಕ್ಷೇತ್ರ ವ್ಯಾಪ್ತಿಯ ವಾರ್ಡ ನಂ.7ರ ಡೋಬಳೆ ಗಲ್ಲಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣ-ಕ್ಕೆ ರೂ.10 ಲಕ್ಷ, ವಾರ್ಡ ನಂ. 21ರ ಗಣೇಶ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ರೂ.10 ಲಕ್ಷ, ವಾರ್ಡ ನಂ.3ರ ಗ್ಯಾಂಗ್ ಬಾವಡಿ ಸರ್ಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ.7ಕ್ಕೆ ರೂ.10 ಲಕ್ಷ, ವಾರ್ಡ ನಂ.6ರ ಕೆ.ಎಚ್.ಬಿ ಕಾಲೊನಿಯಲ್ಲಿ ಗ್ರಂಥಾಲಯ ನಿರ್ಮಾಣಕ್ಕೆ ರೂ.10 ಲಕ್ಷ ಹಾಗೂ ವಿಕಲಚೇತನರ ಅಭಿವೃದ್ಧಿ/ಕಲ್ಯಾಣ ಕಾರ್ಯಕ್ರಮಕ್ಕಾಗಿ ರೂ.20 ಲಕ್ಷ ಅನುದಾನ ಮಂಜೂರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಡಿಸಿ ಗೆಣ್ಣೂರ ರಿಂದ ಎ.ಡಿ.ಜಿ.ಪಿ ಅರುಣ ಚಕ್ರವರ್ತಿ ಗೆ ಕೃತಿ ಅರ್ಪಣೆ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರಕ್ಕೆ ಆಗಮಿಸಿದ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಬೆಂಗಳೂರಿನ, ಎ.ಡಿ.ಜಿ.ಪಿ ಅರುಣ ಚಕ್ರವರ್ತಿ ಐ.ಪಿ. ಎಸ್ ಅವರನ್ನು ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರ ಸಮ್ಮುಖದಲ್ಲಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರು ತಾವು ರಚಿಸಿದ "ಅಂಬೇಡ್ಕರ್ ಮಾರ್ಗ " ಎಂಬ ಪುಸ್ತಕವನ್ನು ನೀಡಿ ಗೌರವಿಸಿದರು.

ಅದಕ್ಕೆ ಎ.ಡಿ.ಜಿ.ಪಿ ಅರುಣ್ ಚಕ್ರವರ್ತಿ ಐ. ಪಿ. ಎಸ್ ಅವರು ಸಂತಸ ವ್ಯಕ್ತಪಡಿಸಿ, ಈ ಪುಸ್ತಕವನ್ನು ಇಂಗ್ಲೀಷಗೆ ತಾರ್ಜುಮೆ ಮಾಡಿಸಿದರೆ ಒಳ್ಳೆಯದು ಎಂದು ಶುಭ ಹಾರೈಸಿದರು.

# ಆಟದಲ್ಲಿ ಸೋತವರು ಕುಗ್ಗದೆ ಮುನ್ನಡೆಯಬೇಕು :ಕವಡಿ

ಉದಯರಶ್ಮಿ ನ್ಯೂಸ್



ಢವಳಗಿ: ಸೋಲು ಮುಂದಿನ ಸಾಧನೆಯ ಹಾದಿಯನ್ನಾಗಿಸಿಕೊಂಡು ವಿದ್ಯಾರ್ಥಿಗಳು ಸೋಲು-ಗೆಲುವನ್ನು ಅನುಸರಿಸಿಕೊಂಡು ಆಟದಲ್ಲಿ ಮುನ್ನಡೆಯಬೇಕು. ಸೋತವರು ಕುಗ್ಗದೆ, ಗೆದ್ದವರು ಹಿಗ್ಗದೆ ಆಟವಾಡಬೇಕು ಎಂದು ದೈಹಿಕ ಪರಿವೀಕ್ಷಕ ಬಿ ವಾಯ್ ಕವಡಿ ಹೇಳಿದರು.

ಮುದ್ದೇಬಿಹಾಳ ತಾಲ್ಲೂಕಿನ ಢವಳಗಿ ಗ್ರಾಮದ ಬಸವ ಬಾಲ ಭಾರತಿ ಶಾಲೆಯಲ್ಲಿ ಅಗಸ್ಟ 6 ಮಂಗಳವಾರದಂದು ಹಮ್ಮಿಕೊಂಡ ಢವಳಗಿ ಕ್ಲಸ್ಟರ್ ಮಟ್ಟದ ಪ್ರಾಥ-ಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಕ್ರೀಡಾಜ್ಯೋತಿಯನ್ನು ಸ್ವೀಕರಿಸಿ ಮಾತನಾಡಿದರು.

ಮುಖ್ಯ ಅತಿಥಿಯಾದ ಸುಭಾಷ ಗುಡಿಮನಿ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಅಭ್ಯಾಸದ ಜೊತೆಗೆ ಕ್ರೀಡೆಯು ಮುಖ್ಯವಾಗಿದೆ. ಆಟದಲ್ಲಿ ಸೋಲು-ಗೆಲುವನ್ನು ಸಮಾನ ರೀತಿಯಲ್ಲಿ ಸ್ವೀಕರಿಸಿದರೆ ಮಾತ್ರ ನಿಜವಾದ ಆಟಗಾರ ಎಂದು ಮಾತನಾಡಿದರು.

ಢವಳಗಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ದ್ರಾಕ್ಷಾಯಿಣಿ ಮೇಲಿನಮನಿ ಕ್ರೀಡಾಕೂಟವನ್ನು ಗುಂಡು ಎಸೆಯುವುದರ ಮುಖಾಂತರ ಚಾಲನೆ ನೀಡಿದರು.

ಬಸವ ಸಮಿತಿಯ ಉಪಾಧ್ಯಕ್ಷ ನಾನಾಗೌಡ ಕೊಣ್ಣೂರ ಧ್ವಜಾರೋಹಣ ನೆರವೇರಿಸಿದರು.

ಶಿಕ್ಷಣ ಸಂಯೋಜಕ ಡಿ ವಾಯ್ ಗುರಿಕಾರ, ಎಮ್ ಎಸ್ ಗುರಿಕಾರ, ಎಮ್ ಎಸ್ ಮಾಕೊಂಡ, ಜಿ ಎಸ್ ಕೋರಿ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಆನಂದ ಹೀರೆಮಠ, ಉಪಾಧ್ಯಕ್ಷ ಸುರೇಶಗೌಡ ಪಾಟೀಲ, ನಿವೃತ್ತ ಸೈನಿಕ ಸಂಗಮೇಶ ಬಿರಾದಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಎಮ್ ಕೆ ಗುಡಿಮನಿ, ವಿವಿಧ ಶಾಲೆಯ ಮುಖ್ಯಗುರುಗಳಾದ ಬಿ ಎಸ್ ಶೇಕಣ್ಣವರ, ರಮೇಶ ಮೂಲಿಮನಿ, ಸಿ ಪಿ ಮುತ್ತಿನ, ಎಮ್ ಆರ್ ಜುಮನಾಳ, ಶ್ರೀಮತಿ ಎಸ್ ಸಿ ಸಜ್ಜನ, ಎಸ್ ಎಚ್ ಸಜ್ಜನ, ಎಸ್ ಎಮ್ ಸಜ್ಜನ, ಸೇರಿದಂತೆ ಬಸವ ಬಾಲ ಭಾರತಿ ಶಾಲೆಯ ಸಿಬ್ಬಂದಿ ಇದ್ದರು.

## ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಮಾಹಿತಿ

# ಆ.28ರಂದು ಗಡಿನಾಡ ಚೇತನ ಪ್ರಶಸ್ತಿ ಪ್ರದಾನ ಸಮಾರಂಭ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಸುವರ್ಣ-ಸಂಭ್ರಮ-50ರ ಅದ್ದೂ-ರಿಯಾಗಿ ಆಚರಣೆಯೊಂದಿಗೆ ಸಂಭ್ರಮವನ್ನು ವೈಶಿಷ್ಟ ಪೂರ್ಣವಾಗಿ ಆಯೋಜಿಸಲಾಗುವುದು ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಹೇಳಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಸುವರ್ಣ-ಸಂಭ್ರಮ-50ರ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಅಭಿಯಾನದ ಅಂಗವಾಗಿ ಹೊರನಾಡಿನಲ್ಲಿ ಆಯೋಜಿಸುವ ಕಾರ್ಯಕ್ರಮ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಜ್ಯದ ವಿಜಯಪುರ ಸೇರಿದಂತೆ ರಾಯಚೂರ, ಮಂಗಳೂರು, ಮೈಸೂರು 4 ಗಡಿ ಜಿಲ್ಲೆಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಆಯೋಜಿಸಿರುವ ಕಾರ್ಯಕ್ರಮ ಬೆಳಗಾವಿ ವಿಭಾಗದ ಪ್ರಥಮ ಕಾರ್ಯಕ್ರಮವಾಗಿದೆ.

ಜಿಲ್ಲೆಯಲ್ಲಿ ಆಯೋಜಿಸುವ ಕಾರ್ಯಕ್ರಮವನ್ನು ಅತ್ಯಂತ ವೈಶಿಷ್ಟಪೂರ್ಣವಾಗಿ ಹಮ್ಮಿಕೊಂಡಿದ್ದು, ಜಿಲ್ಲೆಗೆ ಹೊಂದಿಕೊಂಡಿರುವ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ತ ತಾಲೂಕಿನ ಗುಡ್ಡಾಪುರ ಶ್ರೀ ದಾನಮ್ಮದೇವಿ ದೇವಸ್ಥಾನದ ಆವರಣದಲ್ಲಿ ಆಗಸ್ಟ 28 ರಂದು ಮಾನ್ಯ ಮುಖ್ಯ ಮಂತ್ರಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಕರ್ನಾಟಕದ ಹಿರಿಯ ಚೇತನಗಳಾದ ನಾಡೋಜ ಡಾ. ಕಯ್ಯಾರ ಕಿಞಣ್ಣ ರೈ, ಪೂಜ್ಯ ಡಾ.ಚನ್ನಬಸವ ಪಟ್ಟದೇವರು, ಡಾ. ಜಯದೇವಿ ತಾಯಿ ಲಿಗಾಡೆ ಅವರ ಹೆಸರಿನಲ್ಲಿ ಸ್ಥಾಪಿಸಲಾದ ಗಡಿನಾಡ ಚೇತನ ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭವು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮ ಅಚ್ಚುಕಟ್ಟಾಗಿ ಹಾಗೂ ವಿಜ್ರಂಭಣೆಯಿಂದ ಆಯೋಜಿಸಲು ಈಗಾಗಲೇ ಶ್ರೀ ದಾನಮ್ಮ ದೇವಿ ದೇವಸ್ಥಾನಕ್ಕೆ ಭೇಟಿ ಅಲ್ಲಿಯ ದೇವಸ್ಥಾನ ಟ್ರಸ್ಟ ಸದಸ್ಯರೊಂದಿಗೆ ಸಭೆ ನಡೆಸಿ ಎಲ್ಲ ರೀತಿಯ ಸಹಾಯ ಸಹಕಾರ ಕೋರಲಾಗಿದೆ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯಲ್ಲಿ ಜತ್ತ ತಾಲೂಕಿನಲ್ಲಿ ದೇವಸ್ಥಾನ ಇರುವುದರಿಂದ ಸಾಂಗ್ಲಿಯ ಜಿಲ್ಲಾಡಳಿದ ಸಹಕಾರ ಕೋರಲಾಗಿದೆ ಎಂದು ಅವರು ಹೇಳಿದರು.

ಜಿಲ್ಲೆಯ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಹಾಗೂ ಎಲ್ಲ ಚುನಾಯಿತ ಜನ ಪ್ರತಿನಿದಿಗಳು ಸಹಕಾರದೊಂದಿಗೆ ಅದ್ದೂರಿಯಾಗಿ ಸಂಭ್ರಮದಿಂದ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಅಂದು ಸ್ಥಳೀಯ ಕಲಾವಿದರುಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಇದರೊಂದಿಗೆ ಗಡಿಭಾಗದ ಸಮಸ್ಯೆಗಳ ಕುರಿತು ವಿಚಾರ ವಿನಿಮಯ ನಡೆಯಲಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸ್ವಾಗತ, ಮೆರವಣಿಗೆ, ವೇದಿಕೆ ನಿರ್ಮಾಣ, ಸಂಸ್ಕೃತಿಕ ಕಾರ್ಯಕ್ರಮ, ವಿಚಾರ ಗೋಷ್ಠಿ, ಸಾರಿಗೆ, ವಸತಿ, ಪ್ರಚಾರ, ಆರೋಗ್ಯ, ಸ್ವಚ್ಚತಾ, ಭದ್ರತೆ ಹಾಗೂ ಊಟೋಪಚಾರ ಸಮಿತಿಗಳನ್ನು ರಚಿಸಲಾಗುವುದು. ಅಚ್ಚುಕಟ್ಟಾಗಿ ಕರ್ತವ್ಯ ನಿರ್ವಹಿಸಲು ಸಮಿತಿಗಳು ಜವಾಬ್ದಾರಿಯುತವಾಗಿ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಲು ನೋಡಿಕೊಳ್ಳುವಂತೆ ರಾಜ್ಯ ಮಟ್ಟದ ಅಧಿಕಾರಿಯೋರ್ವರನ್ನು ನೇಮಿಸಲಾಗುವುದು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗೂ ಚುನಾಯಿತ ಜನಪ್ರತಿನಿಧಿಗಳು ಭಾಗವಹಿಸಲಿರುವುದರಿಂದ, ಸುಸಜ್ಜಿತ ಶಾಮಿಯಾನ, ಕುಡಿಯುವ ನೀರಿನ ವ್ಯವಸ್ಥೆಗೆ ಕ್ರಮ ವಹಿಸಲಾಗುತ್ತಿದೆ. ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವಂತೆ ಎಲ್ಲರೂ ಸಹಕ-ರಿಸುವಂತೆ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ಕಾರ್ಯಕ್ರಮ ವಿಜ್ರಂಭಣೆಯಿಂದ ನಡೆಸಲು ಜಿಲ್ಲಾಡಳಿತ ಎಲ್ಲ ರೀತಿಯ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದರು.

ಸಭೆಯಲ್ಲಿ ಧಾರವಾಡ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಕಾಶ ಮತ್ತೀಹಳ್ಳಿ, ಸದಸ್ಯರಾದ ಸಂಜೀವಕುಮಾರ ಅತಿವಾಳೆ, ಅಶೋಕ ಚಂದರಗಿ, ಡಾ.ಎಮ್.ಎಸ್ ಮಧಬಾವಿ, ಭಗತ್‌ರಾಜ್, ಶಿವರೆಡ್ಡಿ ಖೇಡದ,



ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ ಚಲವಾದಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವ-ರಿಷ್ಠಾಧಿಕಾರಿ ಶಂಕರ ಮಾರಿಹಾಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಬೋವಿ, ದಾನಮ್ಮ ದೇವಿ ದೇವಸ್ಥಾನ ಟ್ರಸ್ಟನ ಉಪಾಧ್ಯಕ್ಷ ಚಂದ್ರಶೇಖರ ಗೊಬ್ಬಿ, ನಿರ್ದೇಶಕ ಪ್ರಕಾಶ ಗಣಿ ಹಾಗೂ ವಿವಿಧ ತಾಲೂಕಿನ ತಹಶೀಲ್ದಾರರು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

# ಪುರಾಣ ಪ್ರವಚನಗಳಿಂದ ಆದರ್ಶ ಬದುಕು ರೂಪಿಸಿಕೊಳ್ಳಲು ಸಾಧ್ಯ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಪುರಾಣ ಪ್ರವಚನಗಳಿಂದ ಆದರ್ಶ ಬದುಕು ರೂಪಿಸಿಕೊಳ್ಳಲು ಸಾಧ್ಯ ಎಂದು ಆಲಮೇಲ ಸಂಸ್ಥಾನ ಹಿರೇಮಠದ ಚಂದ್ರಶೇಖರಶ್ರೀಗಳು ಹೇಳಿದರು.

ತಾಲ್ಲೂಕಿನ ಕೋರವಾರ ಗ್ರಾಮದ ಮಹಾಂತೇಶ್ವರ ಹಿರೇಮಠದಲ್ಲಿ ಸೋಮವಾರ ಆರಂಭಗೊಂಡ ಶ್ರೀಬಸವ ಪುರಾಣ ಹಾಗೂ ಇಷ್ಟಲಿಂಗ ಮಹಾಪೂಜಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.ಇಂದಿನ ಆಧ-ುನಿಕತೆಯ ದಿನಗಳಲ್ಲಿ ಪುರಾಣ, ಪ್ರವಚನಗಳು ಹೆಚ್ಚು ಪ್ರಸ್ತುತವಾಗಿವೆ. ಪವಿತ್ರ ಶ್ರಾವಣ ಮಾಸದ ನಿಮಿತ್ತ ಹಮ್ಮಿಕೊಳ್ಳುವ ಇಂಥ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಗ್ರಾಮದ ಎಲ್ಲರೂ ಭಾಗವಹಿಸಬೇಕು ಎಂದರು.

ಸ್ಥಳೀಯ ಮಹಾಂತೇಶ್ವರ ಹಿರೇಮಠದ ಬಸವಲಿಂಗಶ್ರೀಗಳು ಅಧ್ಯಕ್ಷತೆ ವಹಿಸಿ ಆಶೀರ್ವಚನ ನೀಡಿ, ಶ್ರಾವಣ ಮಾಸದಲ್ಲಿ ಇಷ್ಟಲಿಂಗ ಶಾಸ್ತ್ರೋಕ್ತ ಪೂಜೆಯ ಅಗತ್ಯತೆ, ಮಹತ್ವದ ಕುರಿತು ತಿಳಿಸಿದರು. ನಿಲ್ಲೂರ ಶಿವಬಸವಶ್ರೀಗಳು, ಗುಳೇದಗುಡ್ಡದ ರೇವಣಸಿದ್ಧದೇವರು ಮಾತನಾಡಿದರು.

ಪುರಾಣಿಕ ಪುಟ್ಟರಾಜಶಾಸ್ತ್ರಿ ಹಿರೇಮಠ, ಸಂಗೀತಗಾರ ಶರಣಕುಮಾರ ಯಾಳಗಿ, ತಬಲಾವಾದಕ ಅಡವೀಶಕುಮಾರ, ಡಾ.ಎಸ್.ಎ.ಹಿರೇಮಠ, ಬಸವಣ್ಣ ಜಾಲವಾದಿ, ಗ್ರಾಮದ ಸಂಗಪ್ಪಗೌಡ ಬಿರಾದಾರ ಗುಂಡಪ್ಪಗೌಡ ಬೋರಾವತ್, ಮಾಂತಯ್ಯ ಹಿರೇಮಠ, ರಾಜಶೇಖರ ಛಾಯಾಗೋಳ, ಸಂಗಯ್ಯ ಮೇಲಿನಮಠ, ನಾನಾಗೌಡ ಬೋರಾವತ್, ಸೋಮಶೇಖರ ಹಿರೇಮಠ, ಮಲ್ಲನಗೌಡ ಖೇಮಶೆಟ್ಟಿ, ಚನ್ನಪ್ಪಗೌಡ ಬಿರಾದಾರ, ಗುರುಪಾದ ಹುಣಸಗಿ, ಮಾಂತಗೌಡ ಸುಂಬಡ ಸೇರಿದಂತೆ ಮಹಿಳೆಯರು, ಮಕ್ಕಳು ಇದ್ದರು.

# ಹುಟ್ಟುಕಿವುಡುತನಕ್ಕೆ ಅತ್ಯಾಧುನಿಕ ಶಸ್ತ್ರಚಿಕಿತ್ಸೆ ಲಭ್ಯ :ಡಾ.ಮುಧೋಳ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಕಿವಿ, ಮೂಗು ಹಾಗೂ ಗಂಟಲು ವಿಭಾಗದಲ್ಲಿ ಪ್ರಾರಂಭಿಸಲಾಗಿರುವ ಶ್ರವಣಶಾಸ್ತ್ರ ಮತ್ತು ಮಾತು ಕಲಿಕೆ(ಒಣಜುಠರಡಿಚಿಖಿಥಿ ಂಟಿಜ ಖಠಿಜಜಛಿ ಖಿಜಡಿಚಿ-ಠಿಥಿ) ಕೇಂದ್ರವನ್ನು ವಿವಿ ಕುಲಪತಿ ಡಾ. ಆರ್. ಎಸ್. ಮುಧೋಳ ಸೋಮವಾರ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಅಮೆರಿಕಾ ಮೂಲದ ಕಂಪನಿಯಿಂದ ರೂ. 13 ಲಕ್ಷ ವೆಚ್ಚದ ವಿಶ್ವದರ್ಜೆಯ ಅತ್ಯಾಧುನಿಕ ಯಂತ್ರ ಬೇರಾ (ಃಡಿಚಿಟಿಟಿಜಟ ಇತಠಿಞಜಜ ಖಿಥಿಠಿಟಿಜ ಒಣಜುಠಟಜಣಡಿಥಿ) ವಿಶೇಷ ಮಿದುಳುಬಳ್ಳಿಯ ನರಗಳ ಶ್ರವಣ ಪರೀಕ್ಷಾ ಯಂತ್ರವನ್ನು ಖರೀದಿಸಲಾಗಿದ್ದು, ಇದರಿಂದ ನವಜಾತ ಶಿಶುಗಳ ಕಿವುಡುತನ ತಪಾಸಣೆಗೆ ನೇರವಾಗಲಿದೆ ಎಂದು ಹೇಳಿದರು.

ಈ ವಿಶೇಷ ಯಂತ್ರಗಳ ಮೂಲಕ ಹುಟ್ಟಿನಿಂದ ಕಿವುಡುತನ, ಕಿವಿಯ ಸೋಂಕಿನಿಂದ ನರದೌರ್ಬಲ್ಯ, ಹಿರಿಯ ನಾಗ-ರಿಕರರಲ್ಲಿ ಕಾಯಿಲೆಗಳಿಂದ ಉಂಟಾಗುವ ಕಿವುಡುತನ ತಪಾಸಣೆಗೆ ಸಹಾಯಕವಾಗಲಿದೆ. ಮುಂಬರುವ ದಿನಗಳಲ್ಲಿ ಹುಟ್ಟಿನಿಂದ ಇರುವ ಕಿವುಡುತನದ ಅತ್ಯಾಧುನಿಕ ಶಸ್ತ್ರಚಿಕಿತ್ಸೆ ಕಾಂಕ್ಲಿಯರ ಇಂಪ್ಲಾಂಟ್ ಯೋಜನೆಯನ್ನು ಪ್ರಾರಂಭಿಸಲಾಗುವುದು. ವಿಮಾ ಯೋಜನೆಯಡಿ ಸಂಪೂರ್ಣ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು. ಇದರಿಂದ ಮಕ್ಕಳ ಬೆಳವಣಿಗೆ ಮತ್ತು ಸಮಾಜದಲ್ಲಿ ಎಲ್ಲರಂತೆ ಸಮಾನವಾಗಿ ಬದುಕಲು ಅವರಿಗೆ ಅವಕಾಶ ಮಾಡಿಕೊಡುತ್ತದೆ. ನಾಗ-ರಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ, ಕಿವಿ, ಮೂಗು ಮತ್ತು ಗಂಟಲು ವಿಭಾಗದ ಮುಖ್ಯಸ್ಥ ಡಾ. ಆರ್. ಎನ್. ಕರಡಿ, ಪ್ರಾಧ್ಯಾಪಕ ಡಾ. ಎಚ್. ಟಿ. ಲತಾದೇವಿ, ಡಾ. ಶಶಿಕುಮಾರ, ಡಾ. ಶಿವಶಂಕರ ಆಚಾರ, ಡಾ. ಮೇನಾಲಿ, ಡಾ. ಸುನಿತಾ, ಡಾ. ಶರಣಬಸು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ನೂತನ ಪದಾಧಿಕಾರಿಗಳ ಆಯ್ಕೆ

ಉದಯರಶ್ಮಿ ನ್ಯೂಸ್



ಕೆಂಭಾವಿ: ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ಹೋಬಳಿ ಘಟಕದ ನೂತನ ಪದಾಧಿಕಾ-ರಿಗಳ ಆಯ್ಕೆ ಪ್ರಕ್ರಿಯೆ ಹಾಗೂ ಪದಗ್ರಹಣ ಕಾರ್ಯಕ್ರಮವನ್ನು ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಕಾರ್ಯದರ್ಶಿಯಾದ ಕಾಶೀನಾಥ್ ನಾಟಿಕಾರ್ ಅಂಬೇಡ್ಕರ್ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ದಲಿತ, ಹಿಂದುಳಿದ ಅಲ್ಪಸಂಖ್ಯಾತರು ಸಂವಿಧಾನಾತ್ಮಕವಾದ ಹಕ್ಕುಗಳನ್ನು ಪಡೆಯಲು ನಿರಂತರ ಹೋರಾಟ ನಡೆಸುತ್ತಿದ್ದು, ಯುವಕರನ್ನು ಸಂಘಟಿಸುವ ಉದ್ದೇಶದಿಂದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪದಾಧಿಕಾರಿಗಳ ಆಯ್ಕೆ : ಕೆಂಭಾವಿ ಹೋಬಳಿಯ ಅಧ್ಯಕ್ಷನ್ನಾಗಿ ಪರಶುರಾಮ್. ಎಮ್.ಭೋನ್ಹಾಳ ಹಾಗೂ ಉಪಾಧ್ಯಕ್ಷನ್ನಾಗಿ ರವಿ. ಮಾಳೊಳ್ಳಿಕ್ಕರ್(ಚಿಕ್ಕಣ್ಣ) ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷೆ ಪರಶುರಾಮ್. ಎಮ್. ಭೋನ್ಹಾಳ ಮಾತನಾಡಿ ಬಡವರ ನೊಂದವರ ಹಾಗೂ ದಲಿತರ ಧ್ವನಿಯಾಗಲಿದೆ ಪಟ್ಟಣದ ಹಲವು ಭಾಗಗಳಲ್ಲಿ ಕುಂದು ಕೊರತೆಗಳಿದ್ದು ಅವುಗಳನ್ನು ಬಗೆಹರಿಸುವಲ್ಲಿ ನಮ್ಮ ಸಂಘಟನೆ ಶ್ರಮಿಸುವುದು .ನಮ್ಮ ದಲಿತ ಸಮುದಾಯದ ಮೇಲೆ ಇಂದಿಗೂ ನಡೆಯುತ್ತಿರುವ ಶೋಷಣೆಯನ್ನು ನಮ್ಮ ಸಂಘಟನೆ ಖಂಡಿಸಲಿದೆ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ ಪುರಸಭೆ ಸದ್ಯಸ ಶಿವಪ್ಪ ಕಂಬಾರ, ಬಸವರಾಜ್ ಕಕ್ಕೇರಾ, ಜುಮ್ಮಣ್ಣ ಗುಡಿಮನಿ, ಭೀಮಣ್ಣ ಖ್ಯಾತನಾಳ, ವಿರೂಪಾಕ್ಷ ಕಚಕನೂರ, ಚನ್ನಬಸಪ್ಪ ತಾಳೊಳ್ಳಿ, ಶಿವಲಿಂಗ ಮಾರನೊಳ, ಸಾಯಬಣ್ಣ ಎಂಟಮನ್, ಲಕ್ಷ್ಮಣ ಬಸರಿಗಿಡ, ಮಂಜುನಾಥ್ ಮಲ್ಲಾ ಹಾಗೂ ಇತರರು ಇದ್ದರು.

# ಶ್ರಾವಣ ಮಾಸದಲ್ಲಿ ಶ್ರವಣ ಮುಖ್ಯ :ಡಿ.ಬಿ.ಡೆಂಬ್ರೆ

ಉದಯರಶ್ಮಿ ನ್ಯೂಸ್




ಹೊನವಾಡ: ಶ್ರಾವಣ ಮಾಸ ಪವಿತ್ರ ಮಾಸ, ಈ ಮಾಸದಲ್ಲಿ ನಾವೆಲ್ಲರೂ ಒಳ್ಳೆಯ ವಿಚಾರಗಳನ್ನು ಶ್ರವಣ ಮಾಡಿದರೆ ನಮ್ಮಲ್ಲಿ ಸದ್ಗುಣಗಳು ಬೆಳೆಯುತ್ತವೆ ಎಂದು ಡಿ ಬಿ ಡೆಂಬ್ರೆ ಮಾತನಾಡಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದಲ್ಲಿ ಶ್ರೀ ಸಂಗಮೇಶ್ವರ ದೇವಸ್ಥಾನ ಅಭಿವೃದ್ಧಿ ಮಂಡಳಿ ಹಾಗೂ ಮಾತೋಶ್ರೀ ಈರಮ್ಮ ಶರಣಮ್ಮನವರ ಅಕ್ಕನ ಬಳಗದ ವತಿಯಿಂದ ಶ್ರಾವಣ ಮಾಸದ ಪ್ರಯುಕ್ತ ಬಸವ ಪುರಾಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಂಗಾರದ ಕಿರೀಟವನ್ನು ಇಳಿಸಿ ಶರಣರಿಗೆ ಆಶ್ರಯ ನೀಡಿ ನಾವೆಲ್ಲರೂ ಒಂದೇ ಎಂಬ ತತ್ವಗಳನ್ನು ಸಾರಿದರು. ಹಣದಲ್ಲಿ ಶ್ರೀಮಂತಿಕೆಗಿಂತ ಗುಣದಲ್ಲಿ ಶ್ರೀಮಂತರಿರಬೇಕು ಎಂದು ಹೇಳಿದರು.

ನಮ್ಮ ದೇಶ ಭಕ್ತಿ ಪ್ರಧಾನ ದೇಶ, ಸಾಧು ಸಂತರು ಶರಣರ ತಪಸ್ವಿನ ಫಲ ಪ್ರದವಾಗಿರುವಂತದ್ದು ಸಾಹಿತಿಕವಾಗಿ ಆಧ್ಯಾತ್ಮಿಕವಾಗಿ ಶ್ರೀಮಂತವಾಗಿರುವಂತ ದೇಶ, ಮೊಟ್ಟ ಮೊದಲು ಅನುಭವ ಮಂಟಪ ಸ್ಥಾಪಿಸಿರುವ ಮೊದಲಿಗರಲ್ಲಿ ಬಸವಣ್ಣನವರು ಬಸವ ಪುರಾಣವನ್ನು ಜನರಿಗೆ ತಲುಪಿಸುವಲ್ಲಿ ಪರಿಚಯಿಸುವಲ್ಲಿ ಬಂಥನಾಳ ಶಿವಯೋಗಿಗಳು ಮೊದಲಿಗರು ಎಂದು ರೇ ಸಿ ಪಾಟೀಲ ಮಾತನಾಡಿದರು.

ಕಾಯಕಜೀವಿಗಳ ಕೇಂದ್ರಿತ ಶರಣ ಸಂಕುಲವನ್ನು ಸೃಷ್ಟಿಸಿದರು. ವಿವಿಧ ಕಾಯಕಗಳ ಶೂದ್ರ-ರಿಗೆ, ಮಹಿಳೆಯರಿಗೆ ಮೊದಲ ಬಾರಿಗೆ ಶಿಕ್ಷಣ ನೀಡುವ ವ್ಯವಸ್ಥೆ ಮಾಡಿದರು. ಅವರೆಲ್ಲ ಅನುಭವ ಮಂಟಪದಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು ಎಂದು ನಚಿಕೇತ ಹಿರೇಮಠ್ ಸ್ವಾಮಿಗಳು ಹೇಳಿದರು.

ಬಸವಣ್ಣನವರು ಭಕ್ತರಲ್ಲಿ ಸರ್ವಸಮಾನತೆಯನ್ನು ಕಾಣುತ್ತಾರೆ. ಶರಣರ ದೃಷ್ಟಿಯಲ್ಲಿ ಯಾವ ಕಾಯಕವೂ ಚಿಕ್ಕದಲ್ಲ ಅಥವಾ ದೊಡ್ಡದಲ್ಲ.ಶರಣರ ವಚನಗಳು ಮತ್ತು ತತ್ವ ಕೂಡ ಕಾಯಕದ ಉತ್ಪತ್ತಿಯಾಗಿವೆ ಎಂದು ಪ್ರವಚನಕಾರರಾದ ಭೀಮಾಶಂಕರ ಶರಣರು ಹೇಳಿದರು.

ಕಾರ್ಯಕ್ರಮದಲ್ಲಿ ವಿಜಯಕುಮಾರ್ ಹಿರೇಮಠ್, ಸದಾನಂದ ಮಾಡಗಾಳ ಅರಟಾಳ, ಚಿದಾನಂದಸ್ವಾಮಿ ಮಠಪತಿ, ಸಂಘದ ಅಧ್ಯಕ್ಷ ಬಸವಂತರಾಯ ಮಸಳಿ ಮಲ್ಲಪ್ಪ ಲವಗಿ ಶ್ರೀಶೈಲ ಅರಮೋತಿ ಹೊನವಾಡದ ಶರಣ ಶರಣೆಯರು ಇದ್ದರು.

ಕಾರ್ಯಕ್ರಮವನ್ನು ಆರ್ ಎಂ ಸಕ್ರಿ ನಿರೂಪಿಸಿದರು, ಕಾವ್ಯಾ ಕೋಟಿ ಸಂಗಡಿಗರು ಪ್ರಾರ್ಥನೆಯನ್ನು ಮಾಡಿದರು, ಎನ್ ಬಿ ಕೋಟಿ ಸ್ವಾಗತಿಸಿದರು ಧರೆಪ್ಪ ಸಿದ್ನಾಥ ,

## ದೇವರಹಿಪ್ಪರಗಿ: ಇಂದು ವಿದ್ಯುತ್ ವ್ಯತ್ಯಯ

ದೇವರಹಿಪ್ಪರಗಿ: ಆ.7ರಂದು (ಇಂದು) ಪಟ್ಟಣದ ಇಂಡಿ ರಸ್ತೆಯಲ್ಲಿ ಅಗಲೀಕರಣ ಕಾರಣವಾಗಿ ವಿದ್ಯುತ್ ಕಂಬಗಳ ಸ್ಥಳಾಂತರ ಕೈಗೊಂಡಿರುವುದ-ರಿಂದ ತಹಶೀಲ್ದಾರ ಕಚೇರಿ, ಶ್ರೀಸಿದ್ಧೇಶ್ವರ ಪ್ರೌಢಶಾಲೆಯ ಸುತ್ತಮುತ್ತಲಿನ ಬಡಾವಣೆಗಳ ವಿದ್ಯುತ್ ಮಾರ್ಗಗಳಲ್ಲಿ ಬೆಳಿಗ್ಗೆ 9 ಘಂಟೆಯಿಂದ ಸಾಯಂಕಾಲ 4 ಘಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕಾರಣ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕಾಗಿ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ದೇವರಹಿಪ್ಪರಗಿ ಇವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಆ.9 ರಂದು, ಶ್ರೀ ಆದಿಶೇಷನ ಜಾತ್ರಾ ಮಹೋತ್ಸವ

ಉದಯರಶ್ಮಿ ನ್ಯೂಸ್

ಇಂಡಿ: ನಗರದಲ್ಲಿ ವಿಶೇಷವಾಗಿ ಮಲೆನಾಡಿನ ಶೈಲಿಯ ಹಂಚಿನ ಮೇಲ್ಚಾವಣಿಯನ್ನು ಹೊಂದಿದ, ಪ್ರತ್ಯೇಕವಾಗಿ ನಾಗದೇವರ ದೇವಾಲಯ ನಿರ್ಮಾಣಗೊಂಡಿದ್ದು, ಇದು ಮೂರನೇ ವರ್ಷದ ಜಾತ್ರಾ ಮಹೋತ್ಸವ ಆ.9 ರಂದು ನಡೆಯುತ್ತದೆ ಎಂದು ಜಾತ್ರಾ ಆಡಳಿತ ಮಂಡಳಿ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಂದಗಿ ರಸ್ತೆಯ ಪದವಿ ಕಾಲೇಜು ಪಕ್ಕದ ಹಳೆಯ ಸಾಲೋಟಗಿ ರಸ್ತೆಯ ವಾರ್ಡ್ ನಂಬರ್ 12ರಲ್ಲಿ, ಪ್ರತಿವರ್ಷದಂತೆ ಈ ವರ್ಷವೂ ನಾಗರಪಂಚಮಿಯ ದಿನದಂದು ಮುಂಜಾನೆ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ಆದಿಶೇಷನಿಗೆ ಮಹಾ ಅಭಿಷೇಕ, ಹೋಮ್ ಹವನ ಕಾರ್ಯಕ್ರಮ ನಡೆಯುತ್ತದೆ. ಬೆಳಗ್ಗೆ 7 ಘಂಟೆಯಿಂದಲೆ ಸುಮಂಗಲಿಯರಿಂದ ನಾಗ ದೇವರಿಗೆ ಹಾಲೇ-ರಿಯುವ ಕಾರ್ಯಕ್ರಮ ನಡೆಯುತ್ತದೆ. ಆಗಮಿಸಿದ ಭಕ್ತರಿಗೆ ಅನ್ನಪ್ರಸಾದ ವಿತರಣೆ, ಸಾಯಂಕಾಲ ಭಜನಾ ಮಂಡಳಿಯಿಂದ ಗಾನಸುಧೆ ನಡೆಯುವುದು.

ನಗರದ ಸದ್ಭಕರು ಈ ಪೂಣ್ಯಕಾರ್ಯಕ್ರಮದಲ್ಲಿ ಭಾಗವಹಿಸಿ ಪುನೀತರಾಗಬೇಕಾಗಿ, ಶ್ರೀ ಆದಿಶೇಷ ದೇವಸ್ಥಾನ ಜಾತ್ರಾ ಮಹೋತ್ಸವದ ಕಮೀಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಉತ್ತರ ವಲಯದ ಕ್ರೀಡಾಕೂಟಕ್ಕೆ ದೈ.ಶಿಕ್ಷಕರ ಪ್ರತಿಭಟನೆಯ ಬಿಸಿ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ತಮ್ಮ ಬೇಡಿಕೆಗಳನ್ನು ಸರ್ಕಾರ ಈಡೇರಿಸುತ್ತಿಲ್ಲ ಎಂದು ಬೇಸರಗೊಂಡ ದೈಹಿಕ ಶಿಕ್ಷಕರು ಕೈಗೆ ಕಪ್ಪು ಪಟ್ಟಿ ಧರಿಸಿ ಕ್ರೀಡಾಕೂಟದಲ್ಲಿ ಭಾಗಿಯಾಗಿ ಆಕ್ರೋಶವನ್ನು ಹೊರಹಾಕಿದ್ದಾರೆ.

ಪಟ್ಟಣದ ಶಾಂತಲಾ ಪ್ರೌಢಶಾಲಾ ಮೈದಾನದಲ್ಲಿ ನಡೆದ ತಾಲೂಕಿನ ಪ್ರಾಥಮಿಕ ಶಾಲೆಗಳ ಉತ್ತರ ವಲಯದ ಕ್ರೀಡಾಕೂಟದಲ್ಲಿ ಕೈಗೆ ಪಕ್ಕು ಪಟ್ಟಿ ಧರಿಸಿ ಭಾಗಿಯಾದ ದೈಹಿಕ ಶಿಕ್ಷಕರು, ತಮ್ಮನ್ನು ಸಹಶಿಕ್ಷಕರನ್ನಾಗಿ ಪರಿಗಣಿಸಬೇಕು, ಸಹ ಶಿಕ್ಷಕರಿಗೆ ಸಿಗುವ ಸೌಲಭ್ಯಗಳಾದ ಮುಖ್ಯ ಶಿಕ್ಷಕರಾಗಿ ಬಡ್ತಿ, ಸಿ ಅಂಡ್ ಆರ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಸಿ.ಆರ್.ಪಿ, ಬಿ.ಆರ್.ಪಿ, ಹುದ್ದೆಗಳನ್ನು ನೀಡುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಗಾಗಿ ಹಲವು ಬಾರಿ ಮನವಿ ಮಾಡಿಕೊಂಡಿದ್ದು ಯಾವುದೇ ಪ್ರಯೋಜನವಾಗಿಲ್ಲ. ಹಾಗಾಗಿ ಬೇಡಿಕೆಗಳು ಈಡೇರುವವರಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಪ್ರತಿಭಟನೆಯೊಂದಿಗೆ ಕ್ರೀಡಾಕೂಟವನ್ನು ನಡೆಸುವದಾಗಿ ತಿಳಿಸಿದರು.

ಈ ವೇಳೆ ತಾಲೂಕಿನ ಪ್ರೌಢಶಾಲಾ ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಶೇಖರ ಲಮಾಣಿ, ಗೌರವಾಧ್ಯಕ್ಷ ಚಂದ್ರಕಾಂತ ಮನಗೂಳಿ, ಖಜಾಂಚಿಗಳಾದ ಗುರು ಸಾಲಿಮಠ ಮತ್ತು ಎ.ಸಿ.ಕೆರೂರ, ಬಸವರಾಜ ಭಜಂತ್ರಿ, ಶರಣು ಇದ್ದಲಗಿ, ಬಸವರಾಜ ರಾಮೋಡಗಿ, ನಾಗರಾಜ ಮುದಗಲ್ಲ, ಬಿ.ಎಸ್.ಫಣೇದಕಟ್ಟಿ, ಬಿ.ಜಿ.ತಾಳಿಕೋಟಿ, ಎಸ್.ಕೆ.ಬಿರಾದಾರ, ಆರ್.ವೈ.ಪಾಟೀಲ, ಸಾಗರ ಜಾದವ, ರಾಮನಗೌಡ ಬಿರಾದಾರ, ಯಮನೂರಿ ಹರಿಜನ್, ಎಸ್.ಎ.ಗಂಗನಗೌಡರ, ಐ.ಎಂ.ಕೆಂಭಾವಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಯು.ಬಿ.ಧರಿಕಾರ, ಬಸವರಾಜ ಕೋರಿ, ಆರ್.ಡಿ.ಬಿರಾದಾರ, ಮುಖ್ಯ ಗುರುಗಳಾದ ಎಸ್.ಎಸ್.ಆಳ್ವಿ, ಎಸ್.ಕೆ.ಹರನಾಳ, ಶೋಭಾ ಬಲಕುಂದಿ, ಎ.ಆರ್.ಪಾಟೀಲ, ಈರಣ್ಣ ಬಿಜ್ಜೂರ ಸೇರಿದಂತೆ ಮತ್ತೀತರರು ಭಾಗಿಯಾಗಿದ್ದರು.

# ವಿದ್ಯಾರ್ಥಿಗಳು ಭವಿಷ್ಯದ ಕನಸನ್ನು ಸಾಕರಗೊಳಿಸಲು ಪ್ರಯತ್ನಿಸಿ :ಜಾಧವ

ಉದಯರಶ್ಮಿ ನ್ಯೂಸ್




ದೇವರಹಿಪ್ಪರಗಿ: ವಿದ್ಯಾರ್ಥಿಗಳು ಭವಿಷ್ಯದ ಕನಸನ್ನು ಸಾಕರಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದಾಗ ಮಾತ್ರ ಆಗ ಕನಸು ನನಸಾಗಲು ಸಾಧ್ಯ ಎಂದು ವಿಶ್ರಾಂತ ದೈಹಿಕ ನಿರ್ದೇಶಕ ಅಶೋಕಕುಮಾರ ಜಾಧವ ಹೇಳಿದರು.

ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಜರುಗಿದ 2023-24ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್-ಎಸ್ಎಸ್, ಸ್ಕೌಟ್‌ಗೈಡ್ಸ್ ರೆಡ್‌ಕ್ರಾಸ್ ಚಟುವಟಿಕೆಗಳ ಸಮಾರೋಪ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬಿಳ್ಕೋಡುವ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ವಿದ್ಯಾರ್ಥಿ ಭವಿಷ್ಯದ ಕುರಿತು ಕನಸು ಹೊಂದಿ ತನ್ನ ಕನಸಿನ ಕುರಿತು ಹುಚ್ಚಾಗಬೇಕು ಆಗ ಮಾತ್ರ ಕನಸು ಸಾಕಾರಗೊಳ್ಳುವುದು. ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅಡಿಯಲ್ಲಿ ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಏಕವಲಯ ಅಂತರ ಕಾಲೇಜು ಮಹಿಳೆಯರ ಕಬಡ್ಡಿ ಪಂದ್ಯಾವಳಿ, ಅಂತರ ಮಹಾವಿದ್ಯಾಲಯಗಳ 8ನೇ ಅಥ್ಲೇಟಿಕ್ ಕ್ರೀಡಾಕೂಟ, ಕ್ರಿಕೆಟ್ ಪಂದ್ಯಾವಳಿಗಳನ್ನು ಏರ್ಪಡಿಸುವುದರ ಮೂಲಕ ಮೂವರು ವಿದ್ಯಾರ್ಥಿಗಳು ಯೂನಿವರ್ಸಿಟಿ ಬ್ಲೂಗಳಾಗಿದ್ದು ಹಾಗೂ 20 ಕಿ.ಮೀಗಳ ಮ್ಯಾರಥಾನ್ ಸ್ಪರ್ಧೆಯಲ್ಲಿ ಕಾಲೇಜಿನ ನೀಲಮ್ಮ ಪೂಜಾರಿ ಹಾಗೂ ಕುರೇಶಾಭಾನು 3 ಮತ್ತು 4ನೇ ಸ್ಥಾನ ಪಡೆದಿದ್ದು ನನ್ನ ಕ್ರೀಡಾಜೀವನದ ಅಮೂಲ್ಯ ಕ್ಷಣಗಳು. ಇದಕ್ಕೆ ಕಾರಣೀಭೂತರಾದ ಕಾಲೇಜಿನ ಪ್ರಾಂಶುಪಾಲ ಸಹಿತ ಸಿಬ್ಬಂದಿ ಹಾಗೂ ಪಟ್ಟಣದ ಕ್ರೀಡಾಪ್ರೇಮಿಗಳಿಗೆ ಅನಂತ ಧನ್ಯವಾದ ತಿಳಿಸುತ್ತಾ ಭಾವುಕರಾದರು.

ಕೊಂಡಗೂಳಿ ಕೇಶಿರಾಜ ಪ್ರೌಢಶಾಲೆಯ ವಿಶ್ರಾಂತ ಮುಖ್ಯಶಿಕ್ಷಕ ಎಸ್.ಎನ್.ಬಸವರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ಅಧ್ಯಯನಿಸುವ ಅಗತ್ಯತೆಯಿದೆ ಎಂದು ಹೇಳುತ್ತಾ, ರಾಜಕೀಯ, ಸಂಸ್ಕೃತಿ, ಕನ್ನಡ ಭಾಷಾಭಿಮಾನದ ಕುರಿತು ಸುದೀರ್ಘವಾಗಿ ಮಾತನಾಡಿದರು.

ಕಾಲೇಜು ಪ್ರಾಂಶುಪಾಲ ಅಶೋಕ ಹೆಗಡೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸುಶ್ಮಿತಾ ಹಳ್ಳಿ ವಿದ್ಯಾರ್ಥಿನಿಯಿಂದ ನಂದ ನಂದ ನಾನೇನು ಶ್ರೀಕೃಷ್ಣ ಎಂಬ ಗೀತೆಗೆ ಭರತನಾಟ್ಯ ಜರುಗಿತು. ನಂತರ ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಿಸಲಾಯಿತು. ಜೊತೆಗೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕೊನೆಯಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳನ್ನು ಶುಭಕೋರುವ ಮೂಲಕ ಬಿಳ್ಕೋಡಲಾಯಿತು.

ಪ್ರಾಥಮಿಕ ಶಾಲಾ ಮುಖ್ಯಶಿಕ್ಷಕ ಪಿ.ಸಿ.ತಳಕೇರಿ, ಅಧೀಕ್ಷಕ ಜಗನ್ನಾಥ ಸಜ್ಜನ, ಉಪನ್ಯಾಸಕರುಗಳಾದ ಎಸ್.ಬಿ.ಜಾಲವಾದಿ, ಅಕ್ರಮಪಾಷಾ, ದ್ರಾಕ್ಷಾಯಿಣಮ್ಮ ಎನ್.ಪಿ, ಪ್ರೇಮಕುಮಾರಿ ಪಿ. ಜ್ಯೋತಿ ಹೂಗಾರ, ಎಮ್.ಎಸ್.ಶಿವಶರಣರ, ಬಿ.ಎಸ್.ಬಗಲಿ, ಎಸ್.ಎಸ್.ಗೌಡರ, ಶಿವಕುಮಾರ ಹಿರೇಮಠ, ಗೋಪಾಲ ಚಕ್ರಸಾಲಿ, ವಿಜಯಲಕ್ಷ □□□, ಯಾಸ್ಮೀನ್ ನದಾಫ್, ಬಿ.ಎಚ್.ಹೊಸಮಟ್ಟಿ, ಭೀಮನಗೌಡ ಬಿರಾದಾರ, ಬಿ.ಎಚ್.ಹೊನಮಟ್ಟಿ, ಸವಿತಾ ಪಾಟೀಲ, ಎಚ್.ಎ.ಇನಾಮದಾರ ಸೇರಿದಂತೆ ವಿದ್ಯಾರ್ಥಿಗಳು, ಸಿಬ್ಬಂದಿ ಇದ್ದರು.

# ದುರ್ಗುಣಗಳು ವ್ಯಕ್ತಿತ್ವವನ್ನು ಕ್ಷೀಣಿಸುತ್ತವೆ :ಸಿದ್ದರಾಮ ಶ್ರೀಗಳು

ಉದಯರಶ್ಮಿ ನ್ಯೂಸ್



ಕಲಕೇರಿ: ದುರ್ಗುಣಗಳು ವ್ಯಕ್ತಿತ್ವವನ್ನು ಕ್ಷೀಣಿಸುತ್ತವೆ. ಶಿಸ್ತು, ಸಂಯಮ ಹಾಗೂ ಕಲಿಕಾಸಕ್ತಿ, ಕ್ರೀಡೆ ಇನ್ನಿತರ ಚಟುವಟಿಕೆಗಳಲ್ಲಿ ಪ್ರತಿಯೊಬ್ಬರು ಸಕ್ರೀಯವಾಗಿ ಭಾಗಿಯಾಗುವದರಿಂದ ವಿದ್ಯಾರ್ಥಿಗಳ ಬದುಕು ಸುಂದರ ಮತ್ತು ಸದೃಡಗೊಳ್ಳುತ್ತದೆ ಎಂದು ಕಲಕೇರಿ ಗುರುಮರುಳಾರಾಧ್ಯರ ಹಿರೇಮಠದ ಸಿದ್ದರಾಮ ಶಿವಾಚಾರ್ಯರು ಹೇಳಿದರು.

ಕಲಕೇರಿ ಗ್ರಾಮದ ಮಲ್ಲಿಕಾರ್ಜುನ ವಿಧ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಅನುದಾನಿತ ಶ್ರೀ ಬಸವೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಮಂಗಳವಾರ ಬೆಳಿಗ್ಗೆ 10 ಘಂಟೆಗೆ ನಡೆದ 2024-25 ನೇ ಸಾಲಿನ ಸಾಂಸ್ಕೃತಿಕ ಮತ್ತು ಶಾರೀರಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ಪಿಯುಸಿ ವಿಧ್ಯಾರ್ಥಿಗಳ ಸ್ವಾಗತ ಸಮಾರಂಭದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ತಮ್ಮ ಪಾಲಕರ ಪೋಷಕರ ಕ್ಷದ ಅರಿವು ಇಟ್ಟುಕೊಳ್ಳಬೇಕು, ಮನೆಯಲ್ಲಿ ಅನೇಕ ಕಷ್ಟ ಕಾರ್ಪಣ್ಯಗಳ ಮಧ್ಯೆಯೂ ತಮ್ಮ ಮಕ್ಕಳ ವಿಧ್ಯಾಭ್ಯಾಸಕ್ಕೆ ಯಾವುದೇ ತೊಂದರೆಯಾಗದಂತೆ ಅವರು ನೊಡಿಕೊಳ್ಳುತ್ತಾರೆ ಆದರೆ ಇಂದು ಅದೆಷ್ಟೋ ವಿಧ್ಯಾರ್ಥಿಗಳು ಮೋಬೈಲ್ ಚಾಳಿಗೆ ಬಿದ್ದು ತಮ್ಮ ಉಜ್ವಲ ಭವಿಷ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ ಇದು ವಿಷಾದನೀಯ. ಇದೆಲ್ಲವನ್ನು ಬದಿಗೊತ್ತಿ ವಿದ್ಯಾಗುರುಗಳು ಮತ್ತು ಪಾಲಕರ ಮಾರ್ಗದರ್ಶನದಲ್ಲಿ ಮುನ್ನಡೆದು ಉತ್ತಮ ಪ್ರಜೆಗಳಾಗಿ ಹೊರಹೊಮ್ಮುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸಿಂದಗಿಯ ಎಚ್ ಜಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎ ಆರ್ ಹೆಗ್ಗಣದೊಡ್ಡಿ, ಕಲಕೇರಿ ಪಿಎಸ್ಐ ಸುರೇಶ ಮಂಟೂರ ವಿಶೇಷ ಉಪನ್ಯಾಸ ನೀಡಿದರು.

ಸಂಸ್ಥೆಯ ಕಾರ್ಯದರ್ಶಿ ಮಲ್ಲಿಕಾರ್ಜುನ ಜೋಗುರ, ಸಂಸ್ಥೆಯ ಅಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿದರು.

ಸಂಸ್ಥೆಯ ಹಿರಿಯ ನಿರ್ದೇಶಕ ಷಣ್ಮುಕಪ್ಪ ಝುಳಕಿ, ಮಲಕಾಜಪ್ಪಗೌಡ ಬಿರಾದಾರ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಪ್ರಾಚಾರ್ಯ ಸಿ ಎಸ್ ಹಿರೇಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಇಲಾಖೆಯಲ್ಲಿ ಸೇವೆಯನ್ನು ಸಲ್ಲಿಸಿ ನಿವೃತ್ತರಾದ ಟಿಇಎಂ ಪ್ರೌಡಶಾಲೆಯ ಮುಖ್ಯಗುರು ಬಿ ಡಿ ಭಾಣಕಾರ ಮತ್ತು ದ್ವಿತಿಯ ದರ್ಜೆ ಸಹಾಯಕ ನಬಿಲಾಲ್ ಬಡೆಮಗೋಳ ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಪುಷ್ಪಗಳನ್ನು ನೀಡಿ ಕಾಲೇಜಿಗೆ ಸ್ವಾಗತಿಸಿದರು. ಈ ವೇಳೆ ಕಾಲೇಜಿನ ವಿಧ್ಯಾರ್ಥಿಗಳಿಂದ ಸಾಂಸ್ಕೃತಿಕ, ಮನೊರಂಜನಾ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಸಿದ್ದಣ್ಣ ಚಳ್ಳಗಿ, ವೀರಪ್ಪ ಝುಳಕಿ, ಅಪ್ಪಾಸಾಬ ಗುಮಶೇಟ್ಟಿ, ಎಸ್ ಬಿ ಪಾಟೀಲ, ದೇವಿಂದ್ರ ಹುಲೆಂಕಿ, ಸಾಂತವೀರ ಧುರ್ಗಿ, ಎಸ್ ಎಸ್ ಕಲಶೇಟ್ಟಿ, ಬಿ ಜಿ ಚನಗೊಂಡ, ಜಿ ಜಿ ಮಡೆದಾರ, ರವಿಕುಮಾರ ಗುಮಶೇಟ್ಟಿ, ಬಸವರಾಜ್ ಕುಂಬಾರ, ವಿರೇಶ ಝುಳಕಿ, ಶಿವಕುಮಾರ ಚಿಕ್ಕಮಠ, ಭೋರಮ್ಮ ಗೋಟಗುಣಕಿ, ಸ್ವಪ್ನ ಸಜ್ಜನ್, ಮಡಿವಾಳಪ್ಪ ಹಯ್ಯಾಳ, ಕಾವೇರಿ ಪತ್ತಾರ ಸೇರಿದಂತೆ ಇತರರು ಇದ್ದರು.

# ಆ.7ರಿಂದ ಪವಾಡಬಸವೇಶ್ವರ ಜಾತ್ರಾ ಮಹೋತ್ಸವ

ಉದಯರಶ್ಮಿ ನ್ಯೂಸ್




ಮುದ್ದೇಬಿಹಾಳ: ತಾಲೂಕಿನ ಗೋನಾಳ ಪಿ.ಎನ್ ಗ್ರಾಮದ ಪವಾಡಬಸವೇಶ್ವರ ಜಾತ್ರಾ ಮಹೋತ್ಸವ ಪ್ರತೀ ವರ್ಷದಂತೆ ಈ ವರ್ಷವೂ ಆ.7 ರಿಂದ ನಡೆಯಲಿದೆ.

ಅಂದು ರಾತ್ರಿ 10ಗಂಟೆಯಿಂದ ಅಹೋರಾತ್ರಿ ಶಿವ ಭಜನೆ, 8ರಂದು ಬೆಳಿಗ್ಗೆ 8ಕ್ಕೆ ಕಾಶಿ ವಿಶ್ವನಾಥಲಿಂಗಕ್ಕೆ ರುದ್ರಾಭಿಷೇಕ, 9 ಗಂಟೆಗೆ ಪುಟ್ಟಿಗಾಡಿ ರೇಸ್ ಸ್ಪರ್ಧೆ ನಡೆಯಲಿದೆ. ಸ್ಪರ್ಧೆಯನ್ನು ಜಂಬಗಿ-ಮನ್ಯಾಳದ ಪ.ಪೂ ಶಂಕರಲಿಂಗ ಮಹಾರಾಜರು ಉದ್ಘಾಟಿಸುವರು. ಮಧ್ಯಾಹ್ನ ಮಂಗಳಾರತಿ ಮತ್ತು ಮಹಾಪ್ರಸಾದ ಇರಲಿದ್ದು ಎಲ್ಲ ಕಾರ್ಯಕ್ರಮಗಳು ಪೂಜ್ಯ ಶ್ರೀ ಚನ್ನಮಲ್ಲಪ್ಪ ಶರಣರ ನೇತೃತ್ವದಲ್ಲಿ ನಡೆಯಲಿವೆ ಎಂದು ದೇವಸ್ಥಾನದ ಸಮಸ್ತ ದೈವ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

## ಆಲಮಟ್ಟಿ ಪ.ಪೂ.ಡಿಗ್ರಿ ಕಾಲೇಜಿನ ಕ್ರೀಡಾ, ಸಾಂಸ್ಕೃತಿಕ ಚಟುವಟಿಕೆ ಉದ್ಘಾಟನಾ ಸಮಾರಂಭ

# ಜ್ಞಾನದ ಬೆಳಕಿನತ್ತ ಯುವಜನತೆಯ ಹೆಜ್ಜೆಯಿರಲಿ :ಸಂಯುಕ್ತಾ ಪಾಟೀಲ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಶಿಕ್ಷಣ ಜ್ಞಾನವೇ ಶ್ರೇಷ್ಠ. ಅದು ಎಲ್ಲಕ್ಕಿಂತಲೂ ಮಿಗಿಲು. ಸತತ ಓದು, ನಿರಂತರ ಅಧ್ಯಯನದಿಂದ ಭವಿಷ್ಯತ್ತಿನ ಕನಸನ್ನು ನನಸಾಗಿಸಿಕೊಳಬೇಕು. ಆಸಕ್ತಿದಾಯಕ ಕಲಿಕೆಯಿಂದ ಜ್ಞಾನದ ಬೆಳಕಿನಲ್ಲಿ ಹೆಜ್ಜೆ ಗುರುತು ಮೂಡಿಸಬೇಕು ಎಂದು ಕರ್ನಾಟಕ ಪ್ರದೇಶ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಸಂಯುಕ್ತಾ ಪಾಟೀಲ ಯುವಜನತೆಗೆ ಸಲಹೆ ನೀಡಿದರು.

ಸ್ಥಳೀಯ ಎಸ್.ವ್ಹಿ.ವ್ಹಿ ಸಂಸ್ಥೆಯ ಮಂಜಪ್ಪ ಹರ್ಡೇಕರ ಸ್ಮಾರಕ ಸಂಯುಕ್ತ ಪ.ಪೂ ಹಾಗೂ ಪ್ರಥಮ ದರ್ಜೆ ಕಲಾ,ವಾಣಿಜ್ಯ ಮಹಾವಿದ್ಯಾಲಯದ 2024-25 ನೇ ಸಾಲಿನ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಪುಸ್ತಕಗಳೇ ಒಡನಾಡಿಗಳಾಗಬೇಕು. ಅವೇ ನಿಜ ಸ್ನೇಹಿಗಳು. ಕಾರಣ ಪುಸ್ತಕ ಸಂಗಮದಲ್ಲಿ ಬೆಸೆದು ಮಿಂದೇಳಬೇಕು. ಜ್ಞಾನ ಸಂಪತ್ತಿನ ಗರಿಮೆಯಲ್ಲಿ ಮಿನುಗಬೇಕು ಎಂದರು.

ಇಂದಿನ ದಿನಗಳಲ್ಲಿ ಕ್ರೀಡಾ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರಾಮುಖ್ಯತೆ ನೀಡಬೇಕು. ಇವುಗಳಲ್ಲಿ ಬದುಕಿನ ಸಂತಸ ಹುದುಗಿದೆ. ಪಠ್ಯೇತರ ಚಟುವಟಿಕೆಗಳು ಅಪಾರ ಜ್ಞಾನ ವಿಸ್ತಾರ ವೃದ್ಧಿಸುತ್ತವೆ.ಆ ದಿಸೆಯಲ್ಲಿ ಓದಿನೊಂದಿಗೆ ಹಾಗೂ ಕ್ರೀಡಾ ಸಾಂಸ್ಕೃತಿಕ ಸಿರಿಯೊಂದಿಗೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಹೆಚ್ಚು ಯುವಕರನ್ನು ಹೊಂದಿರುವ ದೇಶವೇ ಪ್ರಗತಿದತ್ತ ಸಾಗುತ್ತವೆ.ನಮ್ಮ ದೇಶದಲ್ಲಿ ಶೇ 35 ಕ್ಕಿಂತಲೂ ಹೆಚ್ಚು ಯುವಜನತೆ ಇದ್ದಾರೆ. ಯುವಕರು ನವ ಇತಿಹಾಸ ಬರೆಯುವ ಕ್ಷಮತೆ ಹೊಂದಬೇಕು. ದೇಶದ ನಾಳೆಯ ಸುಂದರ ಭವಿಷ್ಯ ಯುವಜನತೆಯ ಕೈಯಲ್ಲಿದೆ. ಉತ್ಸುಕತೆಯ ಉತ್ತಮ ಆಲೋಚನೆಯುಳ್ಳ ಚೇತನಶೀಲ ಯುವಜನಾಂಗವೇ ದೇಶದ ಅಮೂಲ್ಯ ಸಂಪತ್ತು. ಇಡೀ ಭಾರತದೇಶ ವಿಶ್ವಗುರು ಪಟ್ಟಿ ಧರಿಸುವ ಕಾಲ ಸನ್ನಿಹಿತವಾಗುತ್ತಲಿದೆ ಎಂದರು.

ಯುವಜನತೆ ವಿದ್ಯೆಯು ಜ್ಞಾನ ಅಳವಡಿಸಿಕೊಳ್ಳಬೇಕು. ಆತ್ಮವಿಶ್ವಾಸದ ಪಯಣದಲ್ಲಿ ಸಾಗಬೇಕು. ಆ ದಿವ್ಯ ಆತ್ಮವಿಶ್ವಾಸ ಭರಿತ ಭಾವ ಮೊಗದಲ್ಲಿರಲಿ. ಎಲ್ಲರೂ ಹೇಳುವ ಮಾತು ಆಲಿಸಿ. ಬಳಿಕ ನಿಮ್ಮ ಮನಸ್ಸಿಗೆ ತೋಚುವ ಸಂಕಲ್ಪದ ಗಟ್ಟಿ ನಿರ್ಧಾರ ಸ್ವಂತಿಕೆಯಿಂದ ತೆಗೆದುಕೊಳ್ಳಿ. ಅದುವೇ ನಿಮ್ಮ ಜೀವನದಲ್ಲಿ ದೊಡ್ಡ ಶಕ್ತಿ ತುಂಬುವಂಥದ್ದು.ಆ ನಿಟ್ಟಿನಲ್ಲಿ ಪ್ರಯುತ್ನವೆಂಬ ಆವಿಷ್ಕಾರದ ಜಗದಲ್ಲಿ ಕನಸು ಕಾಣಿ.ನನಸು ಮಾಡಿಕೊಳ್ಳಿ ಎಂದು ಯುವ ಸಮೂಹಕ್ಕೆ ಕಿವಿಮಾತು ಹೇಳಿದರು.

ಕಲಿಕಾಸಕ್ತಿ ಮೈಗೂಡಿಸಿಕೊಂಡು ಪ್ರಜ್ಞಾವಂತರಾಗಿ. ಪ್ರಜ್ಞಾವಂತ ಯುವಕರು ರಾಜಕೀಯ ಕ್ಷೇತ್ರದಲ್ಲಿಂದು ದಾಪುಗಾಲು ಹಾಕುವುದು ಅಗತ್ಯವಿದೆ. ಸಮಾಜದ ಕಾಳಜಿಯುತ ಅಭಿವೃದ್ಧಿಗೆ ಯುವಕರು ರಾಜಕೀಯ ರಂಗಕ್ಕೆ ಪ್ರವೇಶಿಸಲು ಮುಂದಾಗಬೇಕು ಎಂದು ಸಂಯುಕ್ತಾ ಪಾಟೀಲ ಅಭಿಪ್ರಾಯಿಸಿದರು. ಇಲ್ಲಿ ಮಹಾಶರಣ ಮಂಜಪ್ಪ ಹರ್ಡೇಕರ ಶಿಕ್ಷಣ ಸಂಸ್ಥೆ, ಪರಂಪರೆಯಲ್ಲಿ ವ್ಯಾಸಂಗ ಮಾಡುತ್ತಿರುವ ಯುವಜನತೆ ಮಂಜಪ್ಪನವರ ತತ್ವ,ಸಿದ್ಧಾಂತ ಅಳವಡಿಸಿಕೊಂಡು ಉನ್ನತ ಚಿಂತನೆಗಳ ಮೂಲಕ ಬೆಳಕಿಗೆ ಬರಬೇಕು ಎಂದರು.

ಮುಖ್ಯ ಅತಿಥಿ ಮುದ್ದೇಬಿಹಾಳದ ವಿಶ್ರಾಂತ ಪ್ರಾಧ್ಯಾಪಕ, ಸಾಹಿತಿ ಬಿ.ಎಮ್.ಹಿರೇಮಠ ಮಾತನಾಡಿ, ಹರ್ಡೇಕರ ಮಂಜಪ್ಪನವರು ತಪಸ್ಸುಗೈದ ಪವಿತ್ರ ಸ್ಥಳಯಿದು.ಅವರು ಮರೆಯಾಗಿದ್ದರೂ ಅವರ ಆತ್ಮ ಇಲ್ಲಿಯೇ ಇದೆ. ಮಂಜಪ್ಪನವರು ಇಲ್ಲಿ ವೀರಶೈವ ವಿದ್ಯಾಲಯ ಸ್ಥಾಪಿಸಿದ ಪುಣ್ಯಾತ್ಮರು. ಅವರಲ್ಲಿ ಅಪಾರ ಮೌಲ್ಯಗಳಿದ್ದವು.ಆಕಾರ, ಮೌಲ್ಯಗಳಗಿಂತ ಮಂಜಪ್ಪನವರು ದೊಡ್ಡವರು. ಆದರೆ ಸಮಾಜದಲ್ಲಿ ಮಂಜಪ್ಪನವರಿಗೆ ಸರಿಯಾದ ನ್ಯಾಯ ದೊರೆಯದಿರುವುದು ವಿಷಾದ. ಸಿದ್ದಲಿಂಗ ಶ್ರೀ, ಎಂ.ಪಿ.ಪ್ರಕಾಶ, ಜಾಮದಾರ ಈ ಮೇಧಾವಿಗಳು ಮಂಜಪ್ಪನವರ ಆಚಾರ, ವಿಚಾರಗಳಿಗೆ ನ್ಯಾಯ ಒದಗಿಸಲು ಆತ್ಮಸಾಕ್ಷಿಯಾಗಿ ಕೆಲಸ ಮಾಡಿದ್ದಾರೆ. ಇಂಥ ಪುಣ್ಯ ಪುರುಷನನ್ನು ಎಂದಿಗೂ ಮರೆಯಲಾಗದು. ಈ ವಿದ್ಯಾಲಯದಲ್ಲಿ ಎಲ್ಲ ಜನಾಂಗದ ಮಕ್ಕಳು ಕಲಿಕಾಭ್ಯಾಸ ಮಾಡುತ್ತಿರುವುದು ವಿಶೇಷ. ಈ ಸಂಸ್ಥೆಗೆ ನ್ಯಾಯ,ನಿಷ್ಠುರ ಧಾರಣೆಯ ಗದುಗಿನ ತೋಂಟದ ಲಿಂ,ಸಿದ್ದಲಿಂಗ ಶ್ರೀಗಳವರು ಹೊಸ ಅಯಾಮ ನೀಡಿದ್ದಾರೆ ಎಂದರು.

ಮೌಲ್ಯಯುತ ಜೀವ ಹೊಂದಿದ್ದ ತೋಂಟದ ಸಿದ್ದಲಿಂಗ ಶ್ರೀಗಳ ಕೈಯಲ್ಲಿ ಸದಾ ಬಸವ ತತ್ವದ ಕೋಲಿತ್ತು. ವೈಚಾರಿಕ ಭಾವದ ಪೂಜ್ಯರು ಗೈದ ಅಕ್ಷರ ದಾಸೋಹದ ಕೈಂಕರ್ಯ ಸದಾಕಾಲವೂ ಸ್ಮರಣೀಯ ಎಂದ ಅವರು, ವಿದ್ಯಾರ್ಥಿಗಳಿಂದು ಒಳ್ಳೆಯ ವಿದ್ಯೆ,ಬುದ್ದಿ,ಸಂಸ್ಕಾರ,ಸಂಸ್ಕೃತಿಗಳ ಸ್ಪಷ್ಟತೆ ಗುರಿ ಹೊಂದಿ ಜೀವನದಲ್ಲಿ ಮೇಲೆ ಬರಬೇಕೆಂದರು.

ನಿವೃತ್ತ ಪ್ರಾಚಾರ್ಯ, ಬ.ಬಾಗೇವಾಡಿ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶಗೌಡ ಪಾಟೀಲ ಮಾತನಾಡಿ, ತೋಂಟದ ಸಿದ್ದಲಿಂಗ ಶ್ರೀಗಳವರ ಸೇವೆ ಜ್ಞಾನ ದಾಸೋಹದ ಅವಿಭಾಜ್ಯ ಅಂಗ. ಗ್ರಾಮೀಣ ಪ್ರದೇಶದ ಮಕ್ಕಳ ಶೈಕ್ಷಣಿಕ ಪ್ರಗತಿ,ಉನ್ನತಿಯೇ ಅವರ ಕನಸು, ಗುರಿಯಾಗಿತ್ತು. ಹೃದಯವಂತ ತೋಂಟದ ಸಿದ್ದಲಿಂಗ ಪೂಜ್ಯರ ಹಲ ವೈವಿಧ್ಯಮಯ ಸೇವಾ ಪಯಣ ಅಮೋಘ ಎಂದರು.

ಅಧ್ಯಕ್ಷತೆ ವಹಿಸಿದ್ದ ಎಸ್.ವ್ಹಿ. ವ್ಹಿ. ಸಂಸ್ಥೆ ಕಾರ್ಯದರ್ಶಿ ಪ್ರೊ.ಶಿವಾನಂದ ಪಟ್ಟಣಶೆಟ್ಟರ, ವಿದ್ಯಾರ್ಥಿ ಜೀವನ ತಪಸ್ಸಿದ್ದಂತೆ. ಕ್ರಿಯಾಶೀಲತೆವೆಂಬ ಮೂಲ ತತ್ವದ ಸಂಪ್ರದಾಯದಡಿ ಪರಿಶ್ರಮ ಮತ್ತು ಶ್ರದ್ಧೆಯಿಂದ ಕಲಿಕೆ



ಸಾಗಿಸಿಕೊಂಡರೆ ಗುರಿ ತಲುಪಲು ಸಾಧ್ಯ. ಕ್ರೀಡೆ,ಸಾಂಸ್ಕೃತಿಕ ಚಟುವಟಿಕೆಗಳು ಕಲಿಕಾಸಕ್ತಿಗೆ ಪ್ರೇರೇಪಿಸುತ್ತದೆ ಎಂದರು.

ಅರಳೆಲೆ ಕಟ್ಟಿಮನಿ ಹಿರೇಮಠದ ಸಿದ್ದರೇಣುಕ ಶಿವಾಚಾರ್ಯ ಸಾನಿಧ್ಯ ವಹಿಸಿ ಆಶೀರ್ವದಿಸಿದರು. ಮುಖ್ಯ ಅತಿಥಿಗಳಾಗಿ ಆಲಮಟ್ಟಿ ಗ್ರಾಪಂ ಅಧ್ಯಕ್ಷೆ ಶ್ರೀಮತಿ ಕವಿತಾ ಬಡಿಗೇರ ವೇದಿಕೆಯಲ್ಲಿದ್ದರು.

ಪ್ರಾಚಾರ್ಯ ಪ್ರಭುಸ್ವಾಮಿ ಹೇಮಗಿರಿಮಠ, ಎಚ್.ಎನ್.ಕೆಲೂರ, ಮುಖ್ಯ ಶಿಕ್ಷಕ ಜಿ.ಎಂ.ಕೋಟ್ಯಾಳ, ಎಸ್.ಆರ್.ಗಿಡ್ಡಪ್ಪಗೋಳ, ಉಪನ್ಯಾಸಕರಾದ ಪಿ.ವಾಯ್.ಧನಶೆಟ್ಟಿ, ಎಂ.ಎಸ್.ಸಜ್ಜನ, ಶ್ರೀಮತಿ ಮಮತಾ ಕರೇಮುರಗಿ, ಧನರಾಜ ಸಿಂಗಾರಿ, ಟಿ.ಎಫ್.ದಾಸರ, ಶಾಂತೂ ತಡಸಿ, ಕಾಲೇಜು ಪ್ರಧಾನ ಕಾರ್ಯದರ್ಶಿ ಲಕ್ಷ್ಮೀ ಗುನ್ನಾಪೂರ, ಪ್ರತಿನಿಧಿ ಸ್ನೇಹಾ ಜಗತಾಪ ಸೇರಿದಂತೆ ಪದವಿ ಕಾಲೇಜು ಸಿಬ್ಬಂದಿಗಳು ಇತರರಿದ್ದರು. ಪ್ರಾಚಾರ್ಯ ಪ್ರಭುಸ್ವಾಮಿ ಹೇಮಗಿರಿಮಠ ಸ್ವಾಗತಿಸಿದರು. ಟಿ.ಬಿ.ಕರದಾನಿ ನಿರೂಪಿಸಿದರು. ಎಚ್.ಎನ್.ಕೆಲೂರ ವಂದಿಸಿದರು

# ಜೆಜೆಎಂ ಕಾಮಗಾರಿಯಲ್ಲಿ ಕಳಪೆ :ಚಿದಾನಂದ ಆರೋಪ

ಉದಯರಶ್ಮಿ ನ್ಯೂಸ್

ಆಲಮೇಲ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಜಲ ಜೀವನ ಮಷೀನ್ ( ಜೆ,ಜೆ,-ಎಮ್) ಯೋಜನೆಯ ಅಡಿಯಲ್ಲಿ ವಿಜಯಪುರ ಜಿಲ್ಲೆಯ ಸಿಂದಗಿ ಮತ್ತು ಆಲಮೇಲ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಜಲ ಜೀವನ ಮಷೀನ್ ಕಾಮಗಾರಿಗಳು ನಡೆಯುತ್ತಿದ್ದು ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಈ ಯೋಜನೆಗೆ ಸಂಬಂಧಿಸಿದ ಎಲ್ಲಾ ಮಾರ್ಗ ಸೂಚಿಗಳನ್ನು ಗಾಳಿಗೆ ತೂರಿ ಗುತ್ತಿಗೆದಾರರಿಗೆ ಅನಕೂಲು ಮಾಡಿ ಕೊಡುವ ನಿಟ್ಟಿನಲ್ಲಿ ಸಹಕಾರ ನೀಡಿದ್ದಾರೆ ಎಂದು ಸಮಾಜ ಸೇವಕ ಚಿದಾನಂದ ದೇಸಾಯಿ ಆರೋಪಿಸಿದ್ದಾರೆ.

ಈ ಕುರಿತು ದಿನಾಂಕ 01-03-2024 ರಂದು ಜಿಲ್ಲೆಯ ಉನ್ನತ ಅಧಿಕಾರಿಗಳಿಗೆ ದಾಖಲೆ ಸಮೇತ ಮತ್ತು ಬರವಣಿಗೆಯ ಮೂಲಕ ಮನವಿ ಕೊಟ್ಟಿದ್ದೇನೆ ಮನವಿ ಕೊಟ್ಟು ಆರು ತಿಂಗಳ ಗತಿಸಿವೆ ಇಲ್ಲಿಯ ವರೆಗೆ ಭ್ರಷ್ಟ ಅಧಿಕಾರಿಗಳ ಹಾಗೂ ಗುತ್ತಿಗೆದಾರರಿಗೆ ಯಾವುದೇ ಕ್ರಮ ಕೈಗೊಂಡಿಲ್ಲ ಮತ್ತು ತಂಡ ರಚನೆ ಮಾಡಿ ಸ್ಥಾನಿಕ ಚೌಕಸ್ಸಿ ಕೂಡಾ ಮಾಡಿಲ್ಲ ಹೀಗಾಗಿ ಸರಕಾರದ ದುಡ್ಡು ಪೋಲಾಗಿ ಕಾಮಗಾರಿಗಳು ಹಳ್ಳ ಹಿಡಿದಿವೆ ಇದಕ್ಕೆ ಸಂಬದ ಪಟ್ಟ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿ ಹಾಗೂ ಕರ್ತವ್ಯ ದುರುಪಯೋಗ ಹಣದ ದುರಾಸೆಯಿಂದ



ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಕಳಪೆ ಮಟ್ಟದ ಕಾಮಗಾರಿಗಳು ಮಾಡುತ್ತಿರುವುದು ಕಂಡು ಬರುತ್ತಿದೆ ಕಾರಣ ಜಿಲ್ಲಾ ದಂಡಾಧಿಕಾರಿಗಳು ಮತ್ತು ಜಿಲ್ಲಾ ಕಾರ್ಯ ನಿರ್ವಾಹಕ ಅಧಿಕಾರಿಗಳು ದೂರಿನನ್ವಯ ಕಾಮಗಾರಿಗಳು ಕುಲಂಕುಷವಾಗಿ ಪರಿಶೀಲಿಸಿ ಎಲ್ಲಾ ಕಾಮಗಾರಿಗಳ ಬಿಲ್ಲನ್ನು ತಡೆ ಹಿಡಿದು ಕಾಮಗಾರಿಯನ್ನು ಭೌತಿಕವಾಗಿ ಪರಿಶೀಲನೆ ಮಾಡಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಜಿಲ್ಲಾ ದಂಡಾಧಿಕಾರಿಗಳಲ್ಲಿ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಗ್ರಹ ಮಾಡಿದ್ದಾರೆ.

ಇದೇ ರೀತಿ ವಿಳಂಬ ನೀತಿ ಅನುಸರಿಸಿದರೆ ಜನಪರ ಸಂಘಟನೆ ಒಳಗೊಂಡು ಪ್ರತಿಭಟನೆ ಮಾಡುವುದು ಅನಿವಾರ್ಯವಾಗುತ್ತದೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ಎಚ್ಚರಿಕೆ ನೀಡಿದ್ದಾರೆ.

# ಗಾಂಧಿಯುಗ ಮತ್ತೆ ಮರುಕಳಿಸಬೇಕಿದೆ :ಸಜ್ಜನ

ಉದಯರಶ್ಮಿ ನ್ಯೂಸ್




ಮುದ್ದೇಬಿಹಾಳ: ಗಾಂಧೀಜಿಯವರೊಬ್ಬರು ವ್ಯಕ್ತಿಯಾಗಿರಲಿಲ್ಲ ದೊಡ್ಡ ಶಕ್ತಿಯಾಗಿದ್ದರು. ಸ್ವಾತಂತ್ರ ಹೋರಾಟದಲ್ಲಿ ಅವರ ಪಾತ್ರ ಊಹಿಸಲೂ ಸಾಧ್ಯವಿಲ್ಲ ಎಂದು ಎಂಜಿವಿಸಿ ಕಾಲೇಜಿನ ಪ್ರಾಧ್ಯಾಪಕ ಡಾ.ಆರ್.ಎಚ್.ಸಜ್ಜನ ಹೇಳಿದರು.

ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿರುವ ಶಾ ಎಸರ್.ಪಿ.ಓಸ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಳೇಜಿನಲ್ಲಿ ನಡೆದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜೀವನದಲ್ಲಿ ನೈತಿಕ ಮೌಲ್ಯಗಳು ಕುರಿತಾದ ರಾಜ್ಯ ಮಟ್ಟದ ವಿಶೇಷ ಉಪನ್ಯಾಸ, ರಸಪ್ರಶ್ನೆ, ಒಂದು ದಿನದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಆಗಿನ ಕಾಲದಲ್ಲಿ ಭಾರತೀಯರು ಗುಲಾಮರಾಗಿದ್ದರು. ಬ್ರಿಟೀಷರು ಭಾರತೀಯರನ್ನ ಅತ್ಯಂತ ಕೀಳಾಗಿ ಕಾಣುತ್ತಿದ್ದರು. ಸ್ವಾತಂತ್ರ್ಯ ಹೋರಾಟದಲ್ಲಿ ಮುಂಚೂಣಿಯ ಪಾತ್ರ ವಹಿಸಿದ್ದ ಗಾಂಧೀಜಿಯವರು ಎಂದಿಗೂ ಅಧಿಕಾರಕ್ಕೆ ಆಸೆ ಪಟ್ಟವರಲ್ಲ. ಆಗಿನ ಗಾಂಧಿಯುಗ ಮತ್ತೆ ಮರುಕಳಿಸಬೇಕಿದೆ. ಗಾಂಧಿಯವರ ಬಗ್ಗೆ ಮಕ್ಕಳಲ್ಲಿ ಇಲ್ಲ ಸಲ್ಲದ್ದನ್ನು ಹೇಳಿ ತಪ್ಪು ಕಲ್ಪನೆ ಮೂಡಿಸಲಾಗುತ್ತಿದೆ. ಅದನ್ನು ಹೋಗಲಾಡಿಸಬೇಕು ಎಂದರು.

ಕಾನಿಪ ರಾಜ್ಯ ಕಾರ್ಯಕಾರಿಣಿ ಸದಸ್ಯ ಡಿ.ಬಿ.ವಡವಡಗಿ ಮಾತನಾಡಿ, ಗಾಂಧೀಜಿಯವರಲ್ಲಿ ನಾಯಕತ್ವದ ಗುಣಗಳಿದ್ದವು. ಸತ್ಯ, ಅಹಿಂಸೆ ಬಲವಾಗಿ ಪ್ರತಿಪಾದಿಸಿದ್ದರು. ಇಂದಿನ ವಿದ್ಯಾರ್ಥಿಗಳು ಗಾಂಧೀಜಿ ಅವರನ್ನು ಸಂಪೂರ್ಣ ಅರಿತುಕೊಂಡು ಅವರಲ್ಲಿನ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಬೇನಾಳ ಆರ್ಎಸ್‌ನ ರಾಷ್ಟ್ರಪಿತ ಮಹಾತ್ಮ ಗಾಂಧಿ ಫೌಂಡೇಶನ್‌ನ ಸಂಸ್ಥಾಪಕ ನೇತಾಜಿ ಗಾಂಧಿ ಮಾತನಾಡಿ, ಜಗತ್ತಿನ ಸರ್ವಶ್ರೇಷ್ಠ ನಾಯಕ ಗಾಂಧೀಜಿ. 184 ರಾಷ್ಟ್ರಗಳಲ್ಲಿ ಗಾಂಧೀಜಿ ಪ್ರತಿಮೆ ಇವೆ. ಅವರು ಪತ್ರಕರ್ತರೂ ಅಗಿದ್ದರು. ಅವರ ಬಗ್ಗೆ ಮಾತನಾಡುವ ಪರಿಪೂರ್ಣತೆ ಯಾರಿಗೂ ಇಲ್ಲ ಎಂದರು.

ಪ್ರಾಂಶುಪಾಲ ಪ್ರೊ.ಸಿಕಂದರ್ ಧನ್ನೂರ, ಭೂದಾನಿ ಗುಲಾಬಚಂದ ಓಸ್ವಾಲ್, ವಿಜ್ಞಾನ ಶಿಕ್ಷಕ ಎಲ್.ಪಿ.ಕುಲಕರ್ಣಿ, ಗ್ರಾಮೀಣ ಕುಡಿಯುವ ನೀರು ಪೂರೈಕೆ ಉಪ ವಿಭಾಗದ ಎಇಇ ಆರ್.ಎಸ್.ಹಿರೇಗೌಡರ, ಕಾಲೇಜಿನ ಉಪನ್ಯಾಸಕರು, ಪದವಿ ವಿದ್ಯಾರ್ಥಿಗಳು, ಎನ್ಎಸ್ಎಸ್ ಸ್ವಯಂ ಸೇವಕರು ಸೇರಿದಂತೆ ಮತ್ತೀತರರು ಇದ್ದರು. ಡಾ. ಎಚ್.ಎ.ಕಟಗೂರ, ಪ್ರೊ.ಸನಾವುಲ್ಲಾ ಮುಲ್ಲಾ ಕಾರ್ಯಕ್ರಮ ನಿರ್ವಹಿಸಿದರು.

# ಶಾಲಾ–ಕಾಲೇಜು ಎದುರು ಸಿಸಿ ರಸ್ತೆಗಾಗಿ ಸಂಯುಕ್ತಾ ಗೆ ಮನವಿ

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ಇಲ್ಲಿನ ಮಂಜಪ್ಪ ಹಡೇ9ಕರ ಹಾಗೂ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಪ್ರೌಢಶಾಲೆಯ ಅವರಣದಿಂದ ಅತಿ ಸನಿಹದಲ್ಲೇ ಎದುರಿಗಿರುವ ನಿಡಗುಂದಿ–ಆಲಮಟ್ಟಿ ರಸ್ತೆವರೆಗೆ ಸಿ.ಸಿ.ರಸ್ತೆಯೊಂದನ್ನು ನಿಮಿ9ಸಿ ಕೊಡಬೇಕೆಂದು ಕನಾ9ಟಕ ಪ್ರದೇಶ ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಶ್ರೀಮತಿ ಸಂಯುಕ್ತಾ ಪಾಟೀಲ ಅವರಿಗೆ ಸಂಸ್ಥೆಯ ಮುಖ್ಯಸ್ಥರು ಮನವಿ ಪತ್ರ ಸಲ್ಲಿಸಿದರು.

ಇಲ್ಲಿ ಕಾಲೇಜು ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಸಂಯುಕ್ತಾ ಪಾಟೀಲ ಅವರಿಗೆ ಸಿಸಿ ರಸ್ತೆ ಬೇಡಿಕೆಯುಳ್ಳ ಮನವಿ ಪತ್ರವೊಂದನ್ನು ಎಸ್.ವ್ಹಿ.ವ್ಹಿ. ಸಂಸ್ಥೆಯ ಕಾರ್ಯದರ್ಶಿ ಪ್ರೊ.ಶಿವಾನಂದ ಪಟ್ಟಣಶೆಟ್ಟರ ಸಲ್ಲಿಸಿದರು.

ಕನಾ9ಟಕ ಗಾಂಧಿ ಹಡೇ9ಕರ ಮಂಜಪ್ಪ ಹಾಗೂ ವಚನ ಪಿತಾಮಹ ಡಾ.ಫ.ಗು. ಹಳಕಟ್ಟಿ ಮಹಾನ ಶರಣರ ಹೆಸರಿನಿಂದ ನಡೆಯಲ್ಪಡುತ್ತಿರುವ ವಿದ್ಯಾಲಯದ ಮುಂದಿನ ರಸ್ತೆಯನ್ನು ಸಿ.ಸಿ.ರಸ್ತೆಯನ್ನಾಗಿ ಮಾಡಿಕೊಡಬೇಕೆಂದು ಸಂಯುಕ್ತಾ ಪಾಟೀಲ ಅವರಲ್ಲಿ ಬೇಡಿಕೆಯುಳ್ಳ ಮನವಿ ಪತ್ರ ಅಪಿ9ಸಲಾಯಿತು.

ಮಹಾನುಭಾವರ ಹೆಸರಿನಿಂದ ಇವೆರಡು ವಿದ್ಯಾಲಯಗಳನ್ನು ಆಡಳಿತ ಮಂಡಳಿಯವರು ನಿಮಿ9ಸಿರುವ ಒಂದೇ ಕಟ್ಟಡದ ಸೂರಿನಡಿ ನಡೆಯುತ್ತಿದೆ. ಈ ಎರಡು ವಿದ್ಯಾಲಯದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ ಮತ್ತು ಪದವಿ ಸುಮಾರು ಒಂದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಮುಖ್ಯ ರಸ್ತೆಯಿಂದ ಶಾಲಾ–ಕಾಲೇಜು ಕಟ್ಟಡದವರೆಗೆ ಅಂದಾಜು 200 ಮೀ.ಮಣ್ಣಿನ ರಸ್ತೆ ಇದ್ದು ವಿದ್ಯಾರ್ಥಿಗಳಿಗೆ ಹಾಗೂ ಪಾಲಕರಿಗೆ,ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ.ಈ ಸಮಸ್ಯೆ ತಮ್ಮ ಗಮನಕ್ಕೂ ಈ ಮುಂಚೆಯೂ ತರಲಾಗಿದೆ. ತಾವು ಕೂಡಾ ಸಿಸಿ ರಸ್ತೆ ಮಾಡಿಕೊಡುವುದಾಗಿ ಭರವಸೆಯನ್ನು ನೀಡಿರುವಿರಿ. ಮಳೆಗಾಲದಲ್ಲಿ ಬಹಳಷ್ಟು ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಗಿದೆ. ಕಾರಣ ಶಿಕ್ಷಣ ಬಗ್ಗೆ ಕಾಳಜಿ ಹೊಂದಿರುವ ತಾವು ಮತ್ತು ಈ ಭಾಗದ ಜನಪ್ರಿಯ ಶಾಸಕರು,ಮಂತ್ರಿಗಳು ಅಗಿರುವ ತಮ್ಮ ತಂದೆಯವರಾದ ಶಿವಾನಂದ ಪಾಟೀಲರು ಈ ಶಾಲೆ,ಕಾಲೇಜಿಗೆ ಸಿ.ಸಿ.ರಸ್ತೆಯನ್ನು ಕಲ್ಪಿಸಕೊಡುತ್ತಾರೆಂದು ಸಾವಿರಾರು ಯುವ ವಿದ್ಯಾರ್ಥಿಗಳು,ಸಂಸ್ಥೆಯ ನೂರಾರು ಸಿಬ್ಬಂದಿಗಳು ನಂಬಿದ್ದಾರೆ. ಅಚ್ಚಳಿಯದಂತೆ ಉಳಿಯುವ ಈ ಸಿಸಿ ರಸ್ತೆ ಕಾರ್ಯವನ್ನು ತಾವು ನೆರವೇರಿಸಿ ಕೊಡುವಿರೆಂಬ ಆಚಲ ವಿಶ್ವಾಸ ಈ ಭಾಗದ ಜನತೆದ್ದಾಗಿದೆ ಎಂದು ಮನವಿ ಮಾಡಿಕೊಂಡಿದ್ದಾರೆ.

ಈ ವೇಳೆ ಮುಖ್ಯಸ್ಥರ ಮನವಿಗೆ ಸ್ಪಂದಿಸಿ ಈಡೇರಿಸುವ ಭರವಸೆ ಸಂಯುಕ್ತಾ ಪಾಟೀಲ ನೀಡಿದರು. ಪ್ರೊ.ಎಸ್.ಎಸ್.ಪಟ್ಟಣಶೆಟ್ಟರ, ಪ್ರಾಚಾರ್ಯ ಪ್ರಭುಸ್ವಾಮಿ ಹೇಮಗಿರಿಮಠ, ವಿಶ್ರಾಂತ ಪ್ರಾಚಾರ್ಯ, ಬಸವನ ಬಾಗೇವಾಡಿ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶಗೌಡ ಪಾಟೀಲ, ವಿಶ್ರಾಂತ ಪ್ರಾಧ್ಯಾಪಕ ಬಿ.ಎಮ್.ಹಿರೇಮಠ ಇದ್ದರು.

# ಇಂಡಿಯಲ್ಲಿ ಸ್ವಾತಂತ್ರ್ಯೋತ್ಸವ ಅರ್ಥಪೂರ್ಣ ಆಚರಣೆಗೆ ನಿರ್ಧಾರ

**ಉದಯರಶ್ಮಿ ನ್ಯೂಸ್**




ಇಂಡಿ: ಸ್ವತಂತ್ರ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಧಿಕಾರಿಗಳು ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಕಂದಾಯ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ಮಂಗಳವಾರ ಹೇಳಿದರು.

ಸ್ವತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ಅಗಸ್ಟ್ 6 ರಂದು ತಾಲ್ಲೂಕು ಆಡಳಿತ ಸೌಧದಲ್ಲಿ ಹಮ್ಮಿಕೊಂಡಿರುವ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತಾನಾಡಿದರು.

ಸ್ವತಂತ್ರ್ಯೋತ್ಸವ ದಿನಾಚರಣೆ ನಿಮಿತ್ಯ ಅಗಸ್ಟ್ 15 ರಂದು ಬೆಳಿಗ್ಗೆ 8 ಘಂಟೆಗೆ ತಾಲ್ಲೂಕು ಆಡಳಿತ ಸೌಧದ ಹಾಗೂ ವಿವಿಧ ತಾಲ್ಲೂಕು ಕಛೇರಿ ಹಾಗೂ ಇತರೆ ಕಡೆ ಧ್ವಜಾರೋಹಣ ನೆರವೆರಿಲಿದ್ದು ತದನಂತರ 9 ಘಂಟೆಗೆ ತಾಲ್ಲೂಕು ಕ್ರೀಡಾಂಗಣದಲ್ಲಿ ಧ್ವಜಾರೋಹಣ ನಡೆಯಲಿದೆ. ಸ್ವತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ರಚಿಸಲ್ಪಟ್ಟ ಸಮಿತಿಗಳು ವಹಿಸಲಾದ ಕರ್ತವ್ಯಗಳನ್ನು ಚಾಚು ತಪ್ಪದೆ ಪಾಲಿಸಬೇಕು. ಯಾವುದೇ ನಿಯಮ ಉಲ್ಲಂಘನೆ ಯಾಗದಂತೆ ಹಾಗೂ ಸರಕಾರದ ಶಿಷ್ಟಾಚಾರ ಪಾಲನೆಯೊಂದಿಗೆ ಕಾರ್ಯಕ್ರಮವು ವ್ಯವಸ್ಥಿತವಾಗಿ ಆಯೋಜನೆ ಮಾಡಬೇಕು ಎಂದು ಸೂಚಿಸಿದರು.

ಅದಲ್ಲದೇ ತಾಲ್ಲೂಕು ಕೇಂದ್ರದ ಪ್ರಮುಖ ರಸ್ತೆಗಳು, ವೃತ್ತಗಳ ಸ್ವಚ್ಚತೆ ಹಾಗೂ ಅಲಂಕಾರಕ್ಕೆ, ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ಬಗ್ಗೆ ಹಾಗೂ ಹಿರಿಯ ನಾಗರಿಕರಿಗೆ, ವಿಶೇಷ ವ್ಯಕ್ತಿಗಳಿಗೆ, ಮಹಿಳೆಯರಿಗೆ, ವಿಧ್ಯಾರ್ಥಿಗಳಿಗೆ ಮತ್ತು ಪತ್ರಿಕಾ ಮಾಧ್ಯಮ ದವರಿಗೆ ಸೂಕ್ತ ಅಸನದ ವ್ಯವಸ್ಥೆ ಕಲ್ಪಿಸಬೇಕು. ಇನ್ನೂ ವಿಧ್ಯಾರ್ಥಿಗಳಿಗಾಗಿ ಲಘು ಉಪಾಹಾರದ ವ್ಯವಸ್ಥೆ ಮಾಡಿಕೊಳ್ಳಬೇಕು.

ಸ್ವತಂತ್ರ್ಯೋತ್ಸವದ ಅಂಗವಾಗಿ ನಡೆಯುವ ಪಥಸಂಚಲನಕ್ಕೆ ಪೋಲಿಸ್ ಇಲಾಖೆಯಿಂದ ಅಗತ್ಯ ಪೂರ್ವಭಾವಿ ತರಬೇತಿ ನೀಡಬೇಕು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಕೆ ಎಸ್ ಆರ್ ಟಿ ಸಿ ಬಸ್ ಸೌಕರ್ಯ ಒದಗಿಸಬೇಕು. ಇನ್ನೂ ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ತುರ್ತು ಪರಿಸ್ಥಿತಿ ನಿರ್ವಹಣೆಗಾಗಿ ಅಗತ್ಯ ಸಿಬ್ಬಂದಿಯೊಂದಿಗೆ ಅಂಬುಲೆನ್ಸ್ ಹಾಗೂ ಅಗ್ನಿ ಶಾಮಕ ಇಲಾಖೆಯಿಂದ ವಾಹನ ಒದಗಿಸಬೇಕು. ಶಾಲಾ ಮಕ್ಕಳಿಂದ ನೃತ್ಯ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನಗೈದ ಗಣ್ಯರಿಗೆ ಸನ್ಮಾನಿ ಗೌರವಿಸಲಾಗುವುದು ಎಂದು ಹೇಳಿದರು. ಅದಲ್ಲದೇ ಗ್ಯಾರಂಟಿ ಯೋಜನೆ ಬಗ್ಗೆ ಸಂಪೂರ್ಣ ಪ್ರಗತಿಯ ಮಾಹಿತಿ ಕೊಡಬೇಕು ಎಂದು ಸಂಬಂಧಿಸಿದ ಇಲಾಖೆಯವರಿಗೆ ಸೂಚಿಸಿದರು. ತಹಶಿಲ್ದಾರ ಬಿ ಎಸ್ ಕಡಕಭಾವಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯ ಅಧಿಕಾರಿ ಮಹಾಂತೇಶ ಹಂಗರಗಿ, ಸಿಪಿಐ ಎಮ್ ಎಮ್ ಡಪ್ಪಿನ, ಕ್ಷೇತ್ರ ಶಿಕ್ಷಣ ಅಧಿಕಾರಿ ಟಿ ಆಸ್ ಆಲಗೂರ,

ಕೃಷಿ ಅಧಿಕಾರಿ ಮಹಾದೇವ ಏವೂರ, ಕೆಇಬಿ ಎಸ್ ಆರ್ ಮೆಂಡೆದಾರ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಂಘಟನೆಗಳ ಅಧ್ಯಕ್ಷರು ಮುಖಂಡರು ಉಪಸ್ಥಿತರಿದ್ದರು.

# ಸಿಂದಗಿಯಲ್ಲಿ ಸ್ವಾತಂತ್ರೋತ್ಸವ ಆಚರಣೆ ಪೂರ್ವಭಾವಿ ಸಭೆ

**ಉದಯರಶ್ಮಿ ನ್ಯೂಸ್**




ಸಿಂದಗಿ: ದಂಡಾಧಿಕಾರಿಗಳ ಕಾರ್ಯಾಲಯ ಸಭಾಂಗಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಮಾತನಾಡಿದರು.

ಆ.15ರಂದು ಆಚರಿಸಲ್ಪಡುವ ಸ್ವಾತಂತ್ರೋತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆಯಲ್ಲಿ ಎಲ್ಲರೂ ಭಾಗಿಯಾಗಬೇಕು. ಅಂದು ಬೆಳಗ್ಗೆ 7.45ರ ಒಳಗೆ ಎಲ್ಲ ಸರ್ಕಾರಿ, ಅರೇ ಸರ್ಕಾರಿ ಕಚೇರಿ ಮತ್ತು ಶಾಲಾ–ಕಾಲೇಜುಗಳಲ್ಲಿ ಧ್ವಜಾರೋಹಣ ನಡೆಸಬೇಕು. ನಂತರ 8.00ಕ್ಕೆ ತಹಶೀಲ್ದಾರ್ ಆವರಣಕ್ಕೆ ಆಗಮಿಸಬೇಕು, ತಾಲೂಕು ಕ್ರೀಡಾಂಗಣದಲ್ಲಿ ಬೆಳಗ್ಗೆ ಸರಿಯಾಗಿ 9 ಗಂಟೆಗೆ ಆರಂಭವಾಗುವ ವೇದಿಕೆ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ಎಲ್ಲ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು. ಆಯಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯ ಹಂಚಿಕೆಯಂತೆ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಾರ್ಯಕ್ರಮಕ್ಕೆ ತಾಲೂಕಾಡಳಿತದಿಂದ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು.

ಸಭೆಯಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತ ಅವರ ಪ್ರತಿನಿಧಿಗಳು ಖರ್ಚು ನೀಡುವುದಾಗಿ ಸಭೆಯಲ್ಲಿ ಹೇಳಿ ಹೋಗುತ್ತಾರೆ ಆದರೆ ತಾಲೂಕಿನ ಕೆಲವು ಇಲಾಖೆಯಿಂದ ಸರಿಯಾದ ಸ್ಪಂದನೆ ಮತ್ತು ಆರ್ಥಿಕ ನೆರವು ದೊರೆಯುವುದಿಲ್ಲ. ಮೊಬೈಲ್ ಸ್ವೀಚ್ ಆಫ್ ಮಾಡಿರುತ್ತಾರೆ. ಸಭೆಯಲ್ಲಿ ಜವಾಬ್ದಾರಿ ವಹಿಸಿಕೊಂಡ ಹೋದ ಅಧಿಕಾರಿಗಳು ಆರ್ಥಿಕ ನೆರವು ನೀಡುವುದಿಲ್ಲ ಎಂದು ತಹಶೀಲ್ದಾರ್ ಕಾರ್ಯಾಲಯದ ಸಿಬ್ಬಂದಿ ತಮ್ಮ ಅಸಹಾಯಕತೆ ವ್ಯಕ್ತಪಡಿಸಿದರು. ಮುಂಬರುವ ದಿನಮಾನಗಳಲ್ಲಿ ಹೀಗಾಗದಂತೆ ನೋಡಿಕೊಳ್ಳಿ ಎಂದು ತಾಲೂಕು ದಂಡಾಧಿಕಾರಿಗಳು ಹೇಳಿದರು.

ಇದೇ ಸಂದರ್ಭದಲ್ಲಿ ಇತ್ತೀಚಗೆ ನಿವೃತ್ತರಾದ ವೀರಯೋಧರನ್ನು, ದ್ವಿತೀಯ ಪಿಯುಸಿ ಮತ್ತು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಪ್ರಥಮ ಸ್ಥಾನಗಳಿಸಿದ ವಿದ್ಯಾರ್ಥಿಗಳಿಗೆ, ಪ್ರಗತಿಪರ ರೈತರಿಗೆ, ಮತ್ತು ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಗುವುದು.

ವಿವಿಧ ತಂಡಗಳ ರಚನೆ: ಕ್ರೀಡಾಂಗಣದ ವ್ಯವಸ್ಥೆ, ವೇದಿಕೆ ಮತ್ತು ಕಾರ್ಯಕ್ರಮ ನಿರ್ವಹಣೆ, ಪಥ ಸಂಚಲನ ಹಾಗೂ ಧ್ವಜದ ವ್ಯವಸ್ಥೆ, ಆರೋಗ್ಯ ಮತ್ತು ಮುಂಜಾಗ್ರತಾ ಕ್ರಮಗಳು, ಸ್ವಚ್ಛತೆ, ಕಾವಯತ್, ಎಲ್ಲ ವೃತ್ತಗಳಿಗೂ ದೀಪಾಲಂಕಾರ, ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಯಾವುದೇ ಲೋಪದೋಷ ಆಗದಂತೆ ಕಾರ್ಯಕ್ರಮ ನಡೆಯುವಂತಾಗಬೇಕು. ಸರಕಾರಿ ಶಾಲೆಯ ಮಕ್ಕಳು, ಅನುದಾನ ರಹಿತ, ಅನುದಾನಿತ ಶಾಲಾ ಮಕ್ಕಳಿಂದ ಬ್ಯಾಂಡ್, ಸಾಂಸ್ಕೃತಿಕ ಕಾರ್ಯಕ್ರಮಗಳು, ಲಘು ಉಪಹಾರ, ಹಾಲು ವಿತರಣೆ, ಆರೋಗ್ಯ, ಅಗ್ನಿಶಾಮಕ ಇಲಾಖೆಯಿಂದ ತುರ್ತು ಸೇವೆ ಸಿದ್ಧತೆ, ಅರಣ್ಯ ಇಲಾಖೆಯಿಂದ ಉಪನ್ಯಾಸ ಸೇರಿದಂತೆ ಹಲವಾರು ವಿಷಯಗಳ ನಿರ್ವಹಣೆಯ ಬಗ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಸೇರಿದಂತೆ ವಿವಿಧ ವ್ಯವಸ್ಥೆಗಳಿಗಾಗಿ ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಯಿತು.

ತಾಲೂಕು ಆಡಳಿತ ಹಮ್ಮಿಕೊಳ್ಳುವ ಪ್ರಮುಖ ಪೂರ್ವಭಾವಿ ಸಭೆಗಳಲ್ಲಿ ಹಲವು ಇಲಾಖೆಯ ಅಧಿಕಾರಿಗಳು ಗೈರಾಗುತ್ತಿರುವುದಕ್ಕೆ ಮಾಧ್ಯಮದವರು ಆಕ್ರೋಶ ವ್ಯಕ್ತಪಡಿಸಿದರು. ಸಭೆಗೆ ಗೈರಾಗುವ ಅಧಿಕಾರಿಗಳ ವಿರುದ್ಧ ಸೂಕ್ತಕ್ರಮಕೈಗೊಳ್ಳುವಂತೆ ತಿಳಿಸಲಾಯಿತು.

ಇದೇ ಸಂದರ್ಭದಲ್ಲಿ ನೌಕರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ಪುರಸಭೆ ಮುಖ್ಯಾಧಿಕಾರಿ ಸುರೇಶ ನಾಯಕ, ದೈಹಿಕ ನಿರ್ದೇಶಕ ರವಿ ಗೋಲಾ, ಪಿಎಸ್‌ಐ ಆರೀಫ್ ಮುಷಾಪುರಿ, ಕಸಾಪ ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ, ಉಪನೋಂದಣಾಧಿಕಾರಿ ಎಮ್.ಆರ್.ಪಾಟೀಲ, ಸಿಡಿಪಿಓ ಶಂಭುಲಿಂಗ ಹಿರೇಮಠ, ಹೆಸ್ಕಾಂ ಎಇಇ ಸಿ.ಡಿ.ನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಆಟೋ ಚಾಲಕರು ಅನುಚಿತ ವರ್ತನೆ ತೋರಿದರೆ ಸೂಕ್ತ ಕ್ರಮ :ತಿಪರೆಡ್ಡಿ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ನಿಗಧಿತ ಬಾಡಿಗೆಗಿಂತ ಹೆಚ್ಚಿನ ಹಣ ಪಡೆದುಕೊಳ್ಳುವದು, ಅತೀ ವೇಗದ ಚಲಾವಣೆ, ಮದ್ಯದ ಅಮಲಿನಲ್ಲಿ ಅಟೋ ರಿಕ್ಷಾ ಚಲಾಯಿಸಿದರೆ ಅಂಥವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವದಾಗಿ ಪಿಎಸ್‌ಐ ಸಂಜೀವ ತಿಪರೆಡ್ಡಿ ಎಚ್ಚರಿಸಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಅಟೋರಿಕ್ಷಾ ಚಾಲಕರು ಮತ್ತು ಮಾಲೀಕರಿಗೆ ಸಂಚಾರಿ ನಿಯಮಗಳ ಬಗ್ಗೆ ಅರಿವು ಮೂಡಿಸುವ ಕುರಿತು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಡ್ಡಾಯವಾಗಿ ಪ್ರತಿಯೊಬ್ಬ ಆಟೊರಿಕ್ಷಾ ಚಾಲಕರು ಚಾಲನಾ ಪರವಾನಿಗೆ, ವಾಹನ ವಿಮೆ, ಆರ್‌ಸಿ ಪುಸ್ತಕ ಹೊಂದಿರಬೇಕು. ಪ್ರಯಾಣಿಕರು ಕೇಳಿದ ಸ್ಥಳಗಳಿಗೆ ಕರೆದುಕೊಂಡು ಹೋಗಲು ನಿರಾಕರಿಸುವಂತಿಲ್ಲ, ಯಾವೊಬ್ಬ ಚಾಲಕರು ಸಮವಸ್ತ್ರ ಧರಿಸದೇ ಆಟೋ ಚಲಾವಣೆ ಮಾಡುವಂತಿಲ್ಲ, ಆಟೋರಿಕ್ಷಾದಲ್ಲಿ ಮೀಟರ ಅಳವಡಿಸಿಕೊಳ್ಳಬೇಕು, ಮಹಿಳಾ ಪ್ರಯಾಣಿಕರ ಜೊತೆ ದುರ್ನಡತೆ ತೋರಬಾರದು, ಪಟ್ಟಣದಲ್ಲಿ ಸಾರ್ವಜನಿಕರಿಗೆ, ವ್ಯಾಪಾರಸ್ಥರಿಗೆ ತೊಂದರೆ ಆಗದಂತೆ ಪಾರ್ಕಿಂಗ್ ಮಾಡಬೇಕು, ಚಾಲರು ತಮ್ಮ ಆಟೋರಿಕ್ಷಾದಲ್ಲಿ ಮೀತಿಗಿಂತ ಹೆಚ್ಚಿನ ಪ್ರಯಾಣಿಕರು ಹಾಗೂ ಶಾಲಾ ಮಕ್ಕಳನ್ನು ಹಾಕುವುದು, ಅತೀಯಾದ ವೇಗ, ಹಿಂದೆ ಬರುವ ವಾಹನಗಳಿಗೆ ರಸ್ತೆ ನೀಡದಿರುವದು, ಗುಟಕಾ ತಿನ್ನುತ್ತ ಚಲಾವಣೆ ಮಾಡುವದು, ಉಗಿಯಲು ಹೊರಕ್ಕೆ ಕುತ್ತಿಗೆ ಹಾಕುವದು, ರಿಕ್ಷಾ ಸ್ಟ್ಯಾಂಡ್ ನಲ್ಲಿ ಅನುಚಿತ ವರ್ತನೆ ಕಂಡು ಬಂದಲ್ಲಿ ಮುಲಾಜಿಲ್ಲದೆ ಸೂಕ್ತ ಕ್ರಮ ಕೈಗೊಳ್ಳೂವದಾಗಿ ಎಚ್ಚರಿಸಿದರು.

ಈ ವೇಳೆ ಕ್ರೈಂ ಪಿ.ಎಸ್.ಆಯ್ ಆರ್.ಎಲ್.ಮುನ್ನಾಬಾಯಿ ಮಾತನಾಡಿ ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸುವುದಲ್ಲದೆ ರಸ್ತೆ ನಿಯಮಗಳನ್ನು ಪಾಲಿಸಿ ಅಪಘಾತಗಳನ್ನು ತಪ್ಪಿಸಬೇಕು. ಬಾಡಿಗೆಗೆ ಹೋದಾಗ ಸಂಶಯಾಸ್ಪದ ವ್ಯಕ್ತಿಗಳು ಕಂಡು ಬಂದರೆ ಕೂಡಲೇ ಪೊಲೀಸ್ ಠಾಣೆಗೆ ತಿಳಿಸಬೇಕು ಎಂದರು.

ಈ ವೇಳೆ ಪೊಲೀಸ್ ಸಿಬ್ಬಂದಿಗಳು, 100ಕ್ಕೂ ಹೆಚ್ಚು ರಿಕ್ಷಾ ಚಾಲಕರು ಮತ್ತು ಮಾಲಿ

# ಲ್ಯಾಪಟಾಪ್ ಮರಳಿಸಿ ಪ್ರಾಮಾಣಿಕತೆ ಮೆರೆದ ಚಾಲಕ–ನಿರ್ವಾಹಕ

**ಉದಯರಶ್ಮಿ ನ್ಯೂಸ್**



ವಿಜಯಪುರ: ವಿಜಯಪುರದಿಂದ ಮುಳಸಾವಳಗಿಗೆ ಹೊರಡುವ ವಿಜಯಪುರ ಘಟಕ–1ರ ಬಸ್ ಸಂಖ್ಯೆ ಕೆಎ28 ಎಫ್–1703ರಲ್ಲಿ ಪ್ರಯಾಣಿಕರೋರ್ವರು ಮರೆತು ಹೋದ ಲ್ಯಾಪ್‌ಟಾಪ್‌ನ್ನು ಚಾಲಕ ಶೇಖರ ಬೋಗಂ ಹಾಗೂ ನಿರ್ವಾಹಕ ಗುಂಡೂರಾವ ರಾಠೋಡ ಅವರು ಪ್ರಯಾಣಿಕರು ಮರಳಿಸುವ ಮೂಲಕ ಪ್ರಾಮಾಣಿಕತೆ ಮೆರೆದಿರುವ ಘಟನೆ ಜರುಗಿದೆ.

ವಿಜಯಪುರದಿಂದ ಮುಳಸಾವಳಗಿಗೆ ಪ್ರಯಾಣಿಸುತ್ತಿದ್ದ ನೂರಲಿಶಾ ಮಕಾಂದಾರ ಅವರು ಮುಳಸಾವಳಗಿಗೆ ಇಳಿಯುವ ಸಂದರ್ಭದಲ್ಲಿ ತನ್ನ 50 ಸಾವಿರ ಬೆಲೆಬಾಳುವ ಲ್ಯಾಪಟಾಪ್ ಬಸ್ಸಿನಲ್ಲಿಯೇ ಮರೆತು ಬಿಟ್ಟು ಹೋಗಿದ್ದರು. ಬಸ್ಸಿನ ಚಾಲಕ ಹಾಗೂ ನಿರ್ವಾಹಕರು ಲ್ಯಾಪಟಾಪ್‌ನ್ನು ಮೂಲ ಮಾಲೀಕರಿಗೆ ಒಪ್ಪಿಸುವ ಮೂಲಕ ಇತರರಿಗೂ ಮಾದರಿಯಾಗಿದ್ದಾರೆ. ಇವರ ಕಾರ್ಯಕ್ಕೆ ಲ್ಯಾಪಟಾಪ್ ಮಾಲೀಕರಾದ ನೂರಲಿಶಾ ಮಕಾಂದಾರ ಅವರು ಬಹುಮಾನ ನೀಡಲು ಮುಂದೆ ಹೋದಾಗ ನಯವಾಗಿ ತಿರಸ್ಕರಿಸುವ ಮೂಲಕ ಪ್ರಾಮಾಣಿಕತೆ ಮೆರೆದಿದ್ದಾರೆ. ಇವರ ಕಾರ್ಯಕ್ಕೆ ವಿವಿಧ ಸಾರ್ವಜನಿಕರು ಕೊಂಡಾಡಿದ್ದಾರೆ.

# ಸಿಂದಗಿಯಲ್ಲಿ ತಾಲೂಕು ಮಟ್ಟದ ಪಪೂ ಕಾಲೇಜುಗಳ ಅಥ್ಲೆಟಿಕ್ಸ್ ಕ್ರೀಡಾಕೂಟ

# ಕ್ರೀಡೆಗಳಲ್ಲಿ ಸೋಲು–ಗೆಲುವು ಸಾಮಾನ್ಯ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ವಿದ್ಯಾರ್ಥಿಗಳು ಕ್ರಿಯಾಶೀಲರಾಗಬೇಕಾದರೆ ಕ್ರೀಡಾ ಚಟುವಟಿಕೆಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಕ್ರೀಡೆಗಳಲ್ಲಿ ಸೋಲು–ಗೆಲುವು ಸಾಮಾನ್ಯ. ಆದರೆ ವಿದ್ಯಾರ್ಥಿಗಳು ಕ್ರೀಡಾಸ್ಫೂರ್ತಿಯೊಂದಿಗೆ ಭಾಗವಹಿಸಬೇಕು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಆರ್.ಬಿ.ಬೂದಿಹಾಳ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ (ಪದವಿಪೂರ್ವ) ಇಲಾಖೆ ವಿಜಯಪುರ, ಶ್ರೀ ಪದ್ಮರಾಜ ಮಹಿಳಾ ಸ್ವತಂತ್ರ ಪಪೂ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 2024–25ನೆಯ ಸಾಲಿನ ತಾಲೂಕು ಮಟ್ಟದ ಪದವಿಪೂರ್ವ ಕಾಲೇಜುಗಳ ಅಥ್ಲೆಟಿಕ್ಸ್ ಕ್ರೀಡಾಕೂಟದ ಓಲಂಪಿಕ್ ಧ್ವಜಾರೋಹಣವನ್ನು ನೇರವೇರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಬದುಕನ್ನು ಕೂಡಾ ಕ್ರೀಡಾ ಮನೋಭಾವದಿಂದ ಸ್ವೀಕರಿಸಬೇಕು. ಯಾವುದೇ ಕಾರ್ಯನಿರ್ವಹಿಸಬೇಕಾದರೆ ವಿದ್ಯಾರ್ಥಿಗಳಲ್ಲಿ ಶ್ರದ್ಧೆ ಬಹಳ ಮುಖ್ಯ. ಮಕ್ಕಳು ಜೀವನದಲ್ಲಿ ಸಾಧನೆ ಮಾಡಬೇಕು ಎಂದು ಗುರಿ ಹೊಂದಿ ಇತರರಿಗೆ ಮಾದರಿಯಾಗಬೇಕು ಎಂದರು.

ಈ ವೇಳೆ ಆರ್.ಡಿ.ಪಾಟೀಲ ಕಾಲೇಜನ ನಿವೃತ್ತ ಶಿಕ್ಷಕ ಕೆ.ಹೆಚ್.ಸೋಮಾಪೂರ ಕ್ರೀಡಾ ಜ್ಯೋತಿ ಸ್ವೀಕರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ವೈದ್ಯ, ಇಂಜನಿಯರ್, ವಕೀಲರಾಗಬೇಕು ಎಂದು ಆಸೆ ಇಟ್ಟುಕೊಳ್ಳುವಂತೆ ಆಸೆ ಪಡುವಂತೆ ಉತ್ತಮ ಕ್ರೀಡಾಪಟುಗಳಾಗಬೇಕು. ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಒಳ್ಳೆಯ ಕ್ರೀಡಾಪಟುಗಳಾಗಿ ರೂಪುಗೊಳ್ಳಬೇಕು ಎಂದರು ಸಲಹೆ ನೀಡಿದರು.

ಕಾರ್ಯಕ್ರಮದ ಪಾವನ ಸಾನಿಧ್ಯ ವಹಿಸಿದ್ದ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಆಶೀರ್ವಚನ ದಯಪಾಲಿಸಿದರು. ಪ್ರಾಚಾರ್ಯ ಎಮ್,ಎಸ್.ಹೈಯಾಳಕರ ಅಧ್ಯಕ್ಷೀಯ ನುಡಿಗಳನ್ನಾಡಿದರು. ಎಮ್‌ಪಿಎಸ್ ಮಾಡಬಾಳ ಸರಕಾರಿ ಶಾಲೆಯ ದೈಹಿಕ ಶಿಕ್ಷಕ ಸಂಗು ಮಲ್ಲೇದ ಪ್ರತಿಜ್ಞಾವಿಧಿ ಬೋಧಿಸಿದರು.

ತಾಲೂಕು ಮಟ್ಟದ ಕ್ರೀಡೆಗಳಲ್ಲಿ ತಾಲೂಕಿನ ವಿವಿಧ ಪಪೂ ಕಾಲೇಜುಗಳು ಭಾಗವಹಿಸದ್ದರು. ವಿವಿಧ ಪಪೂ ಕಾಲೇಜಿನ ಬಾಲಕರು ಹಾಗೂ ಬಾಲಕಿಯರು ವಿವಿಧ ಸ್ಪರ್ದೆಗಳಲ್ಲಿ ಭಾಗವಹಿಸಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದುಕೊಂಡರು. ಸಮಗ್ರ ವೀರಾಗ್ರಣಿ ಪ್ರಶಸ್ತಿಯು ಶ್ರೀ ಪದ್ಮರಾಜ ಮಹಿಳಾ ಮತ್ತು ಆರ್.ಡಿ.ಪಾಟೀಲ ಕಾಲೇಜು ಮುಡಿಗೇರಿಸಿಕೊಂಡಿತು. ತಾಲೂಕಿನ ವಿವಿಧ ಸರಕಾರಿ ಶಾಲೆಯ ದೈಹಿಕ ಶಿಕ್ಷಕರು ನಿರ್ಣಾಯಕರಾಗಿ ಆಗಮಿಸಿ ಆಟೋಟಗಳನ್ನು ಯಶಸ್ವಿಯಾಗಿ ನೇರವೇರಿಸಿಕೊಟ್ಟರು.

ಉಪನ್ಯಾಸಕ ಜಿ.ಎ.ನಂದಿಮಠ ಸ್ವಾಗತಿಸಿದರು. ವಿದ್ಯಾರ್ಥಿನಿ ವಿದ್ಯಾಶ್ರೀ ತಳವಾರ ಪ್ರಾರ್ಥಿಸಿದರು. ಆಸಿಫ್ ಕೋಕಣಿ ನಿರೂಪಿಸಿದರು. ಗವಿಸಿದ್ದಪ್ಪ ಆನೆಗುಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ಎಸ್.ಎಂ.ಪೂಜಾರಿ, ಬಿ.ಜಿ.ಅವಟಿ, ಎಸ್.ಎನ್.ಸಂಗಮ, ಆರ್.ಆರ್.ನಿಂಬಾಳಕರ, ಸತೀಶ ಬಸರಕೋಡ, ಈರಣ್ಣ ಪಡಶೆಟ್ಟಿ, ವಿಶ್ವನಾಥ ನಂದಿಕೋಲ, ಡಾ.ಶರಣಬಸವ ಜೋಗುರ, ನವೀನ ಶೆಳ್ಳಗಿ, ಜೆ.ಎಂ.ಗಾಣಗೇರ, ಗವಿಸಿದ್ದಪ್ಪ ಆನೆಗುಂದಿ, ಮೌಲಾಲಿ ಯಾಳಗಿ, ಎಸ್.ಎ.ಜಹಗೀರದಾರ, ಸಂಗು ಮಲ್ಲೇದ, ಎಸ್.ಎಸ್.ಮಲ್ಲೇದ, ಜಿ.ಪಿ.ಪೋರವಾಲ ಹಾಗೂ ವ್ಹಿ.ವ್ಹಿ.ಸಾಲಿಮಠ ಮಹಾವಿದ್ಯಾಲಯದ ದೈಹಿಕ ನಿರ್ದೇಶಕ ರವಿ ಗೋಲಾ, ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ಮಹಾಂತೇಶ ನೂಲಾನವರ, ಯು.ಸಿ.ಪೂಜೇರಿ, ಎಂ.ಪಿ.ಸಾಗರ. ಜಿ.ಎ.ನಂದಿಮಠ, ಆರ್.ಎ.ಹಾಲಕೇರಿ, ಎಸ್.ಎಸ್.ಸಜ್ಜನ, ಜಿ.ಎಸ್.ಕುಲಕರ್ಣಿ, ಹೇಮಾ ಹಿರೇಮಠ, ಎಸ್.ಜಿ.ಮಾರ್ಸನಳ್ಳಿ, ಲಕ್ಷ್ಮೀ ಮಾರ್ಸನಳ್ಳಿ, ಹೇಮಾ ಕಾಸರ, ಲಕ್ಷ್ಮೀ ಭಜಂತ್ರಿ, ಶಿವಶಂಕರ ಕುಂಬಾರ, ಶ್ರೀಧರ ಮಲ್ಲೇದ, ಸೇರಿದಂತೆ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿನಿಯರು, ವಿವಿಧ ಪಪೂ ಕಾಲೇಜಿನ ಪ್ರಾಚಾರ್ಯರು, ದೈಹಿಕ ನಿರ್ದೇಶಕರು, ವ್ಯವಸ್ಥಾಪಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

# ಐತಿಹಾಸಿಕ ಮೂಲನಂದೀಶ್ವರ ದೇವಸ್ಥಾನಕ್ಕೆ ಭಕ್ತರ ದಂಡು

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ನಾಡಿನಲ್ಲಿ ಶ್ರಾವಣ ಮಾಸದ ಆರಂಭವಾಗುತ್ತಿದ್ದಂತೆ ಪಟ್ಟಣ ಸೇರಿದಂತೆ ತಾಲೂಕಿನಲ್ಲಿರುವ ಎಲ್ಲ ದೇವಸ್ಥಾನಗಳಲ್ಲಿ ಶ್ರಾವಣ ಮಾಸದ ವಿಶೇಷ ಪೂಜೆ, ರುದ್ರಾಭಿಷೇಕ,ದೇವರಿಗೆ ಭಕ್ತರು ಹರಕೆ ಸಲ್ಲಿಸುವುದು, ಪುರಾಣ–ಪ್ರವಚನ ಆರಂಭ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರಾವಣ ಮಾಸದ ಮೊದಲ ದಿನವಾದ ಸೋಮವಾರ ಆರಂಭವಾದವು.

ಎಲ್ಲ ಮಾಸಗಳಲ್ಲಿ ಶ್ರಾವಣ ಮಾಸ ಹಿಂದುಗಳಿಗೆ ಪವಿತ್ರ ಮಾಸವಾಗಿದೆ. ಈ ಮಾಸದಲ್ಲಿ ಜನರು ಉಪವಾಸ ವ್ರತ ಮಾಡುವದು ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಸಹಜ. ಈ ಮಾಸದಲ್ಲಿ ಹಬ್ಬಗಳು ಸಾಲು ಸಾಲಾಗಿ ಆರಂಭವಾಗುತ್ತವೆ. ಈ ಮಾಸದಲ್ಲಿ ನಾಗರಪಂಚಮಿ ಮೊದಲ ಬರುವ ಹಬ್ಬವಾಗಿದೆ. ನಂತರ ವರಮಹಾಲಕ್ಷ್ಮೀ ಪೂಜೆ, ಕೃಷ್ಣ ಜನ್ಮಾಷ್ಟಮಿ, ನೂಲ ಹುಣ್ಣಿಮೆಯಂದು ರಕ್ಷಾ ಬಂಧನ ಹಬ್ಬ, ರಾಘವೇಂದ್ರ ಸ್ವಾಮೀಜಿಗಳ ಆರಾಧನೆ ಸೇರಿದಂತೆ ಅನೇಕ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತವೆ. ಶ್ರಾವಣ ಮಾಸದಲ್ಲಿನ ಪ್ರತಿ ಶುಕ್ರವಾರ ಸುಮಂಗಲೆಯರು ಲಕ್ಷ್ಮೀ ಪೂಜೆ ಮಾಡುವುದು ವಿಶೇಷ.

ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ (ಬಸವೇಶ್ವರ) ದೇವರಿಗೂ ಸಹ ಪ್ರತಿ ಶ್ರಾವಣ ಮಾಸದಲ್ಲಿ ಒಂದು ತಿಂಗಳ ಕಾಲ ಬೆಳಗ್ಗೆ ವಿಶೇಷ ರುದ್ರಾಭಿಷೇಕ ಮೊದಲಿನಿಂದಲೂ ನಡೆದುಕೊಂಡು ಬಂದಿದೆ. ಈ ವರ್ಷದ ಶ್ರಾವಣ ಮಾಸದ ರುದ್ರಾಭಿಷೇಕ ಸೋಮವಾರ ಆರಂಭವಾಯಿತು. ಈ ಪೂಜೆಯಲ್ಲಿ ಸಾಕಷ್ಟು ಭಕ್ತರು ರುದ್ರಾಭಿಷೇಕ ಮಾಡಿಸುವ ಮೂಲಕ ತಮ್ಮ ಭಕ್ತಿಯನ್ನು ಅರ್ಪಿಸುತ್ತಾರೆ. ಶ್ರಾವಣ ಮಾಸದಲ್ಲಿ ಬಸವೇಶ್ವರ ದೇವಸ್ಥಾನಕ್ಕೆ ನಾಡಿನ ನಾನಾ ಭಾಗದಿಂದ ಸಾಕಷ್ಟು ಭಕ್ತರು ಬಂದು ದರ್ಶನ ಪಡೆದುಕೊಳ್ಳುತ್ತಾರೆ.

ಆ.26 ರಿಂದ 30 ರವರೆಗೆ ಐದು ದಿನಗಳ ಕಾಲ ನಡೆಯುವ ಐತಿಹಾಸಿಕ ಮೂಲನಂದೀಶ್ವರ (ಬಸವೇಶ್ವರ) ಜಾತ್ರಾಮಹೋತ್ಸವ ದಿನಗಳಲ್ಲಿಯಂತೂ ಬಸವ ಭಕ್ತರ ದಂಡೇ ಬಸವನಾಡಿಗೆ ಹರಿದು ಬರುತ್ತದೆ. ಶ್ರಾವಣ ಮಾಸವು ನಾಡಿಗೆ ಸುಭೀಕ್ಷೆಯನ್ನು ನೀಡುವಂತಾಗಲಿ ಎಂದು ಎಲ್ಲ ಭಕ್ತರ ಆಶಯವಾಗಿದೆ.

## ಕರವೇ ವಿಜಯಪುರ ಜಿಲ್ಲಾ ಸಮಿತಿ ವಿಸರ್ಜನೆ!

**ಉದಯರಶ್ಮಿ ನ್ಯೂಸ್**

ವಿಜಯಪುರ: ಆ.5 ರಿಂದ ಜಾರಿಯಾಗುವಂತೆ ರಾಜ್ಯಾಧ್ಯಕ್ಷ ಟಿ ಎ ನಾರಾಯಣಗೌಡರ ಆದೇಶದಂತೆ ರಾಜ್ಯ ಉಪಾಧ್ಯಕ್ಷ ಎಂ ಸಿ ಮುಲ್ಲಾರವರ ನಿರ್ದೇಶನದಂತೆ ವಿಜಯಪುರ ಜಿಲ್ಲಾ ಘಟಕದ ಪದಾಧಿಕಾರಿಗಳು, ಎಲ್ಲ ತಾಲೂಕಾ ಅಧ್ಯಕ್ಷರುಗಳು, ನಗರ ಘಟಕದ ಅಧ್ಯಕ್ಷರುಗಳು ಹಾಗೂ ವಿವಿಧ ಜಿಲ್ಲಾ ಘಟಕಗಳ ಅಧ್ಯಕ್ಷರುಗಳನ್ನು ತುರ್ತಾಗಿ ಇಂದೆ ವಿಸರ್ಜನೆ ಮಾಡಿ ಆದೇಶ ಹೊರಡಿಸಿದೆ ಎಂದು ಕರವೇ ವಿಜಯಪುರ ಜಿಲ್ಲಾಧ್ಯಕ್ಷ ಶ್ರೀಶೈಲ ಮುಳಜಿ ತಿಳಿಸಿದ್ದಾರೆ.

ಮಂಗಳವಾರ ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಎಲ್ಲ ಸಮಿತಿಗಳ ವಿಸರ್ಜನೆಯ ನಂತರ ರಾಜ್ಯ ಸಮಿತಿಯು ಶೀಘ್ರವಾಗಿ ಜಿಲ್ಲಾ ಸಮಿತಿಯನ್ನು ಪುನರಚನೆ ಮಾಡಲಾಗುವದೆಂದು ರಾಜ್ಯಾಧ್ಯಕ್ಷರು ಆದೇಶ ಮಾಡಿದ್ದಾರೆ. ಸಮಿತಿಯ ವಿಸರ್ಜನೆಯ ನಂತರ ಯಾವುದೇ ಹುದ್ದೆಗಳನ್ನು ಉಪಯೋಗಿಸಬಾರದೆಂದು ಕೋರಿದೆ ಮುಂದಿನ ಆದೇಶದವರಗೆ ಎಲ್ಲರೂ ಸಹಕರಿಸಬೇಕೆಂದು ಮುಳಜಿ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR